ವಿಜಯಪುರ | ಸಂಪುಟ 02 | ಸಂಚಿಕೆ 165 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಆಗಸ್ಟ್ 23, 2024

“ನನ್ನ ವಿರುದ್ಧ ಆರೋಪ ಮಾಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಡಾ ಹಗರಣದಿಂದ ಗಮನ ಬೇರೆಡೆಗೆ ಸೆಳೆಯುವ ಹುನ್ನಾರ ಮಾಡುತ್ತಿದ್ದಾರೆ. ಹೇಗಾದರೂ ಅಧಿಕಾರದಲ್ಲೇ ಉಳಿದು ಲೂಟಿ ಹೊಡೆಯಬೇಕೆನ್ನುವ ಧನದಾಹದ ಹಪಾಹಪಿ ಅರ್ಥ ಮಾಡಿಕೊಳ್ಳಬಲ್ಲೆ.”



– ಎಚ್.ಡಿ. ಕುಮಾರಸ್ವಾಮಿ

ಕೇಂದ್ರ ಭಾರಿ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರು

## ಸಾರ್ವಜನಿಕ ಅಹವಾಲು ಸ್ವೀಕಾರ & ಪ್ರಕರಣಗಳ ವಿಲೇವಾರಿ ಸಭೆಯಲ್ಲಿ ಅಧಿಕಾರಿಗಳಿಗೆ ಉಪ ಲೋಕಾಯುಕ್ತ ನ್ಯಾ.ಕೆ.ಎನ್.ಫಣೀಂದ್ರ ಸೂಚನೆ

# ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಆಡಳಿತ ಗುಣಮಟ್ಟ ಹೆಚ್ಚಿಸಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಾರ್ವಜನಿಕ ಸಮಸ್ಯೆಗಳನ್ನು ಪರಿಹಾರ ಮಾಡುವುದು ಸರಕಾರಿ ನೌಕರರ ಆದ್ಯತೆಯಾಗಬೇಕು. ಸಮಸ್ಯೆಗಳು ಉದ್ಭವವಾಗದಂತೆ ತಮಗೆ ವಹಿಸಿದ ಕಾರ್ಯದ ವ್ಯಾಪ್ತಿ, ಜವಾಬ್ದಾರಿ ಅರಿತುಕೊಂಡು ಕಾರ್ಯ ನಿರ್ವಹಿಸಬೇಕು. ಅಧಿಕಾರಿಗಳು ಸಾರ್ವಜನಿಕರೊಂದಿಗೆ ತಾಳ್ಮೆ ಹಾಗೂ ಸೌಜನ್ಯದಿಂದ ವರ್ತಿಸಿ, ಅವರ ಸಮಸ್ಯೆ ಆಲಿಸಿ ಪರಿಹಾರ ಒದಗಿಸುವ ಮೂಲಕ ಸಾರ್ವಜನಿಕ ಆಡಳಿತ ಗುಣಮಟ್ಟ ಹೆಚ್ಚಿಸಬೇಕು ಎಂದು ಕರ್ನಾಟಕ ಉಪ ಲೋಕಾಯುಕ್ತರಾದ ನ್ಯಾ.ಕೆ.ಎನ್. ಫಣೀಂದ್ರ ಹೇಳಿದರು.

ಗುರುವಾರ ನಗರದ ಶ್ರೀ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ನಡೆದ ಸಾರ್ವಜನಿಕ ಅಹವಾಲು, ಕುಂದುಕೊರತೆ, ದೂರು ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯಾವುದೇ ಆಮಿಷಕ್ಕೆ ಒಳಗಾಗದೇ ಸಂದರ್ಭಾನುಸಾರ ಕಾನೂನು ನಿಯಮಾವಳಿಗಳ ಪ್ರಕಾರ ಭ್ರಷ್ಟಾಚಾರರಹಿತ ಸೇವೆ ಸಲ್ಲಿಸುವುದು ಪ್ರತಿಯೊಬ್ಬ ನೌಕರರ ಕರ್ತವ್ಯವಾಗಿದ್ದು, ಅರ್ಹ ಫಲಾನುಭವಿಗಳಿಗೆ ದೊರೆಯಬೇಕಾದ ಸೇವೆಯಲ್ಲಿ ಯಾವುದೇ ವಿಳಂಬವಾಗದಂತೆ ಕಾರ್ಯ ನಿರ್ವಹಿಸಿ, ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಬೇಕು ಎಂದರು.



ಸಾರ್ವಜನಿಕರ ಹಕ್ಕುಗಳ ಉಲ್ಲಂಘನೆಯಾಗದಂತೆ ನೋಡಿಕೊಂಡು ಜನರಿಗೆ ಸರಕಾರಿ ಸೌಲಭ್ಯ ಸವಲತ್ತುಗಳು ಒದಗಿಸಲು ಯಾವುದೇ ವಿಳಂಬವಾಗದಂತೆ ನಿಗದಿತ ಸಮಯದಲ್ಲಿ ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನ ಮಾಡಲು ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಸರ್ಕಾರ ಹಲವಾರು ಯೋಜನೆಗಳನ್ನು ಜಾರಿ ಮಾಡುವುದರ ಮೂಲಕ ಸಾರ್ವಜನಿಕರಿಗೆ ದೊರಕಬೇಕಾದ ಮೂಲಭೂತ ಹಕ್ಕುಗಳನ್ನು ಒದಗಿಸಲು ಆಸ್ಪತ್ರೆಗಳ ನಿರ್ಮಾಣ, ರಸ್ತೆ, ಶಿಕ್ಷಣ ಹೀಗೆ ಹಲವಾರು ಕ್ಷೇತ್ರದಲ್ಲಿ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಶ್ರಮಿಸುತ್ತಿದೆ. ಈ ಯೋಜನೆಗಳ ಸಮಯೋಚಿತ ಅನುಷ್ಠಾನಕ್ಕೆ ಅಧಿಕಾರಿಗಳು ಬದ್ಧರಾಗಿ, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸವಲತ್ತುಗಳನ್ನು ತಲುಪಿಸುವ ಕೆಲಸ ಮಾಡಬೇಕು ಎಂದರು.

ಲೋಕಾಯುಕ್ತಕ್ಕೆ ಒಳಪಡದ ಪ್ರಕರಣಗಳಲ್ಲಿ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಅರ್ಹರಿಗೆ ಉಚಿತವಾಗಿ ಕಾನೂನು ಸಲಹೆ ಹಾಗೂ ಮಾರ್ಗದರ್ಶನ ನೀಡಲಾಗುವುದು. ಸಾರ್ವಜನಿಕರು ಸದುಪಯೋಗ ಮಾಡಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ. ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಷ ಸೋನಾವಣೆ, ವಿಚಾರಣೆ ಶಾಖೆಯ ಉಪ ನಿಬಂಧಕರಾದ ಪ್ರಕಾಶ ಎಲ್.ನಾಡಿಗೇರ,ಲೋಕಾಯುಕ್ತದ ಕಾನೂನು ಅಭಿಪ್ರಾಯದ ಸಹಾಯಕ ನಿಬಂಧಕರಾದ ಶುಭವೀರ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಎಸ್. ಹಾಗರಗಿ ಉಪ ಲೋಕಾಯುಕ್ತ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ.ಪಾಟೀಲ, ವಿಜಯಪುರ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಟಿ.ಮಲ್ಲೇಶ್,ಲೋಕಾಯುಕ್ತ ಡಿವೈಎಸ್‌ಪಿ ಸುರೇಶ ರೆಡ್ಡಿ ಸೇ-ರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ರಾಜಶೇಖರ ದೈವಾಡಿ ಅವರು ಕಾರ್ಯಕ್ರಮ ನಿರ್ವಹಿಸಿದರು.

### ಲೋಕಾಯುಕ್ತ ಸಂಸ್ಥೆಯಿಂದ ಉತ್ತಮ ಸೇವೆ

ಕಾರ್ಯಾಂಗದ ಸುಧಾರಣೆಗೆ ಸರಿಯಾದ ಮಾರ್ಗದರ್ಶನ ನೀಡುತ್ತ ಉತ್ತಮ ಆಡಳಿತ ಹಾಗೂ ಸೇವೆ ಒದಗಿಸಲು ಲೋಕಾಯುಕ್ತ ಸಂಸ್ಥೆಯು ಶ್ರಮಿಸುತ್ತಿದೆ ಸಾರ್ವಜನಿಕ ಅಹವಾಲು ಕಾರ್ಯಕ್ರಮದಲ್ಲಿ ಲೋಕಾಯುಕ್ತಕ್ಕೆ ಅಹವಾಲುಗಳನ್ನು ದಾಖಲೆ ಸಹಿತ ದೂರು ನೀಡುವಂತೆಯೂ, ಅವುಗಳಿಗೆ ಸೂಕ್ತ ಪರಿಹಾರ ಕಲ್ಪಿಸಿಕೊಡಲಾಗುವುದು ಎಂದು ಕರ್ನಾಟಕ ಉಪ ಲೋಕಾಯುಕ್ತರು ಹೇಳಿದರು.

### ರಾಜ ನುಡಿ

ಯಾವ ಕಣ್ಣು ಅಳುವುದಿಲ್ಲವೋ ಅದು ನೋಡುವುದಿಲ್ಲ. ಯಾವ ಹೃದಯ ಮಿಡಿಯುವುದಿಲ್ಲವೋ ಅದು ಅರಿಯುವುದಿಲ್ಲ.

–ಡಾ. ರಾಜಶೇಖರ ನಾಗೂರ

### ವಚನ ಚಿಂತನ



*ಕೆಂಡದ ಮಳೆ ಕರೆವಲ್ಲಿ ಉದಕವಾಗಿರಬೇಕು.*
*ಜಲಪ್ರಳಯವಾದಲ್ಲಿ ವಾಯುವಿನಂತಿರಬೇಕು.*
*ಮಹಾಪ್ರಳಯವಾದಲ್ಲಿ ಆಕಾಶದಂತಿರಬೇಕು.*
*ಜಗತ್ಪ್ರಳಯವಾದಲ್ಲಿ ತನ್ನ ತಾ ಬಿಡಬೇಕು,*
*ಗುಹೇಶ್ವರನೆಂಬ ಲಿಂಗ ತಾನಾಗಿರಬೇಕು.*

ಸ್ಥಿತಪ್ರಜ್ಞನ ಲಕ್ಷಣಗಳನ್ನು ಇಲ್ಲಿ ಅಲ್ಲಮಪ್ರಭುಗಳು ಅತ್ಯಂತ ಸಮರ್ಪಕವಾದ ಉಪಮೆಯಗಳೊಂದಿಗೆ ವಿವರಿಸಿದ್ದಾರೆ. ನಮ್ಮನ್ನು ನಾಶಪಡಿಸುವಂತಹ ಕಷ್ಟಗಳು

ಎದುರಾದಾಗ ನಾವು ಎದೆಗುಂದದೆ ಆ ಕಷ್ಟಗಳನ್ನೆ ನಾಶಪಡಿವಂತಹ ಮನೋಭೂಮಿಕೆಯನ್ನು ಹೊಂದಬೇಕು ಎನ್ನುವಲ್ಲಿ “ಕೆಂಡದ ಮಳೆ ಕರೆವಲ್ಲಿ ಉದಕವಾಗಿರಬೇಕು” ಎಂದಿರುವರು. ಇಲ್ಲಿ ಕೆಂಡದಮಳೆ ಎನ್ನುವುದು ಸರ್ವವನ್ನು ಮುಗಿಸಿ ಹಾಕುವುದನ್ನು ಸಂಕೇತಿಸಿದರೆ ಉದಕ/ನೀರು ಎಂಬುದು ಅದನ್ನೇ ನಾಶಪಡಿಸುವದಾಗಿದೆ. ಮುಂದುವರೆದು ನಾವು ನಂಬಿರುವ ಈ ನೀರೇ ಮಹಾಪ್ರಳಯ ರೂಪದಲ್ಲಿ ಬಂದು ನಾಶಪಡಿಸುವಾಗ ನೀರಿನ ಉತ್ಪತ್ತಿಗೆ ಕಾರ ಣವಾಗಿರುವ ವಾಯುವಿನ ರೂಪವನ್ನು ನಾವು ಆಶ್ರಯಿಸಬೇಕು “ಜಲಪ್ರಳಯ ವಾದಲ್ಲಿ ವಾಯುವಿನಂತಿ-ರಬೇಕು” ಎನ್ನುವಲ್ಲಿ ನೀರು=ಊ2ಔ= ಢಿಜಡಿಠರಜಟಿ ಜಲ ಜನಕ+ಔಥ-ಥಿರಜಟಿ ಆಮ್ಲಜನಕ . ಇಲ್ಲಿ ನೀರಿನ ಜನನಕ್ಕೆ ಕಾರಣವಾದ ಆಮ್ಲಜನ ಕ ಮತ್ತು ಜಲಜನಕಗಳು ಸಂಯೋಗವು ಪೂರ್ವದಲ್ಲಿ ವಾಯುವಿನ ರೂಪದಲ್ಲಿರುವುದು ಹಾಗೂ ಅಲ್ಲಮಪ್ರಭುಗಳ ಈ ವಿಚಾರದ ಬಳಕೆ ಇಲ್ಲಿ ಅತ್ಯಂತ ವೈಜ್ಞಾನಿಕವಾಗಿದೆ.ಈ ವಾಯುವಿನಿಂದಲೂ ಮಹಾಪ್ರಳಯವಾದರೆ ವಾಯುವಿನ ಜನನಕ್ಕೆ ಕಾರಣವಾದ ಹಾಗೂ ಅದನ್ನು ಅಂಟಿಸಿಕೊಳ್ಳದೆ ಭಿನ್ನವಾಗಿರುವ ಆಕಾಶದಂತೆ ನಾವು ಇರಬೇಕು ಎನ್ನುವುದು, ನಮ್ಮ ಮನೋಬಲ ಹೆಚ್ಚಿಸಿಕೊ ಳ್ಳುವ ನಿಟ್ಟಿನಲ್ಲಿ ನಾವು ಉನ್ನತ ಪ್ರಗತಿಯನ್ನು ಸಾಧಿಸಬೇಕಾಗಿರುವುದನ್ನು ಅದು ತೋರುತ್ತದೆ. ಭಾಹ್ಯ ನಂಬಿಕೆಯು ಎಲ್ಲ ಅವಕಾಶಗಳು ಕೈ ಚೆಲ್ಲಿದಾಗ ತೆಗೆದುಕೊಳ್ಳಬೇಕಾದ ಅಂತಿಮ ನಿರ್ಧಾರವನ್ನು ವಚನದ ಕೊನೆಯ ಸಾಲಿನಲ್ಲಿ ತಿಳಿಸಿದ್ದಾರೆ “ಜಗತ್ರಳಯವಾದಲ್ಲಿ ತನ್ನ ತಾ ಬಿಡಬೇಕು, ಗುಹೇಶ್ವರನೆಂಬ ಲಿಂಗ ತಾನಾಗಿರಬೇಕು” ತೊಂದರೆಗಳು ಎದುರಾದಾಗ ಹಿಮ್ಮೆಟ್ಟಿ ಓಡದೆ ಅವು ಗಳನ್ನು ಎದುರಿಸುವ ಮಾನವನ ಪ್ರಯತ್ನವನ್ನು ಮುಂದುವ-ರಿಸಬೇಕು ಎಂದು ತಿಳಿಸುತ್ತಾರೆ ಕೊನೆಯದಾಗಿ ಅವುಗಳಿಂದ ನಾವು ಭಿನ್ನ ಎಂಬ ಭಾವವನ್ನು ತಾಳಿ ಎಲ್ಲವನ್ನು ಮಹಾಲಿಂಗದ ಕರುಣೆಗೆ ಒಪ್ಪಿಸಿ ನಿಶ್ಚಿಂತರಾಗಿರೋಣ ಎಂದು ಸೂಚಿಸಿದ್ದಾರೆ. ಬಸವಣ್ಣನವರು ಸಹ “ ಮಾಡುವಂತಿರಬೇಕು ಮಾಡದಂತಿ-ರ ಬೇಕು. ಮಾಡುವ ಮಾಟದೊಳಗೆ ತಾನಿಲ್ಲದಂತಿರಬೇಕು. ಕೂಡಲಸಂಗಮ ದೇವರ ನೆನೆವುತ್ತ ನೆನೆವುತ್ತ ನೆನೆಯದಂತಿ-ರಬೇಕು.” ಎಂದಿರುವರು.ಜಗದ ಇಂದಿನ ಸಂಕಷ್ಟಕ್ಕೆ ವಚನಗಳು ಸಾಂತ್ವನ ನೀಡಬಲ್ಲವು ಎಂಬುದು ದಿಟ..

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ವಿಶ್ವ ಛಾಯಾಗ್ರಹಣ ದಿನಾಚರಣೆ | ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅಭಿಮತ

# ಛಾಯಾಗ್ರಾಹಕರು ನಮ್ಮ ಸಾಂಸ್ಕೃತಿಕ ರಾಯಭಾರಿಗಳು

**ಉದಯರಶ್ಮಿ ನ್ಯೂಸ್**

ವಿಜಯಪುರ: ನಮ್ಮ ಪರಂಪರೆ, ವಿಶ್ವದ ಐತಿಹಾಸಿಕ ಕ್ಷಣಗಳ ಇತಿಹಾಸ, ತಲೆ ತಲೆ ಮಾರುಗಳ ದಾಖಲಿಕರಣವನ್ನು ತಮ್ಮ ಕ್ಯಾಮರಾಗಳ ಮುಖಾಂತರ ಸೆರೆ ಹಿಡಿದು ಇಡಿ ಜಗತ್ತಿಗೆ ತೋರಿಸುವಲ್ಲಿ ಛಾಯಾಗ್ರಾಹಕರು ಸಾಕ್ಷಿಯಾಗಿಸಿದ್ದಾರೆ. ಇವರೆಲ್ಲ ನಮ್ಮ ಸಾಂಸ್ಕೃತಿಕ ರಾಯಭಾ-ರಿಗಳೆಂದರೆ ತಪ್ಪಲ್ಲ ಎಂದು ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅಭಿಪ್ರಾಯಪಟ್ಟರು.

ನಗರದ ಸರಕಾರಿ ಆರ್ಟ್ ಗ್ಯಾಲ-ರಿಯಲ್ಲಿ ಬುಧವಾರ ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘ ಹಾಗೂ ಕರ್ನಾಟಕ ಛಾಯಾಚಿತ್ರಗ್ರಾಹಕರ ಸಂಘ ಬೆಂಗಳೂರು ಇವರ ಸಹಯೋಗದಲ್ಲಿ “ವಿಶ್ವ ಛಾಯಾಗ್ರಹಣ ದಿನಾಚರಣೆಯ” ಅಂಗವಾಗಿ ಹಮ್ಮಿಕೊಂಡ ಛಾಯಾಗ್ರಹಣ ಕ್ಷೇತ್ರದ ಹಿರಿಯರಿಗೆ ಸನ್ಮಾನ, ಪ್ರತಿಭಾ ಪುರಸ್ಕಾರ ಮತ್ತು ಛಾಯಾಚಿತ್ರಗಳ ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಪ್ರದರ್ಶನದಲ್ಲಿ ಹಲವಾರು ವಿಭಿನ್ನ ವಿಷಯಗಳ ಅದ್ಬುತ ದೃಶ್ಯಕಾವ್ಯವನ್ನು ಛಾಯಾಗ್ರಾಹಕರು ಸೆರೆಹಿಡಿದಿದ್ದಾರೆ. ಸರಕಾರ ಛಾಯಾಗ್ರಾಹಕರಿಗೆ ಎಲ್ಲ ರೀತಿಯ ಆರ್ಥಿಕ ಸೌಲಭ್ಯ ನೀಡಿ ಅವ-ರಿಗೂ ನೆಮ್ಮದಿಯ ಜೀವನ ಸಾಗಿಸುವ ಹಾಗೆ ಮಾಡಬೇಕು. ಸರಕಾರದಿಂದ ಸಿಗುವ ಸವಲತ್ತುಗಳನ್ನು ಛಾಯಾಗ್ರಾಹಕ-ರಿಗೆ ದೊರಕಿಸಿಕೊಡಲು ತಾವೂ ಸಹ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಸಂಗಮೇಶ ಬಬಲೇಶ್ವರ ಭರವಸೆ ನೀಡಿದರು.



ಮುಖ್ಯ ಅತಿಥಿಗಳಾಗಿ ಬಿ.ಎಲ್.ಡಿ.ಇ ವಿಶ್ವವಿದ್ಯಾಲಯದ ಶಸ್ತ್ರ ಚಿಕಿತ್ಸಾ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ದೀಪಕ್ ಆರ್. ಚವ್ಹಾಣ ಮಾತನಾಡಿ, ಇವತ್ತು ಜಗತ್ತಿನಲ್ಲಿ ಛಾಯಾಗ್ರಹಣ ಕ್ಷೇತ್ರ ಕೇವಲ ಉದ್ಯೋಗದ ದೃಷ್ಟಿಯಿಂದ ನೋಡದೆ ವೈದ್ಯಕೀಯ ಕ್ಷೇತ್ರದಲ್ಲಿಯೂ ಕೂಡ ಅದರ ಉಪಯೋಗ ಮಹತ್ವದ್ದಾಗಿದೆ. ಅತ್ಯಂತ ಸೂಕ್ಷ್ಮ ಕ್ಯಾಮರಾಗಳ ಮೂಲಕ ದೇಹದ ವಿವಿಧ ಭಾಗಗಳ ರೋಗ ಪತ್ತೆ ಮಾಡಲು ಮತ್ತು ಅದರ ಪರಿಹಾರಕ್ಕೂ ವೈದ್ಯಕೀಯ ಕ್ಷೇತ್ರದಲ್ಲಿ ಕ್ಯಾಮರಾ ಉಪಯೋಗ ಮಾಡಲಾಗುತ್ತಿದೆ, ಜೊತೆಯಲ್ಲಿ ಜೀವನದ ಆತ್ಮೀಯ ಸಂಬಂಧದ ಅಪರೂಪದ ಕ್ಷಣಗಳನ್ನು ಸೆರೆಹಿಡಿದು ಶಾಶ್ವತವಾಗಿ ಸಂಗ್ರಹಯೋಗ್ಯ ಕೆಲಸ ಮಾಡುತ್ತಿದೆ ಇಂಥ ಕಾರ್ಯ ಮಾಡುತ್ತಿರುವ ಛಾಯಾಗ್ರಾಹಕರು ನಾಡಿನ ಶೇಷ್ಠರ ಸಾಲಿನಲ್ಲಿ ನಿಲುವ ಎಲ್ಲ ಅರ್ಹತೆಗಳು ಇವರಲ್ಲಿದೆ. ನಾವು ಗುರುತಿಸಿ ಗೌರವಿಸುವ ಕೆಲಸ ಮಾಡಬೇಕಿದೆ ಎಂದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿಕಟಪೂರ್ವ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಗದೀಶ ಬೋಳಸೂರ ಮಾತನಾಡಿ, ಛಾಯಾಗ್ರಾಹಕರು ಶಿಸ್ತು, ಸಂಯಮ ದಿಂದ ಜೀವನ ನಡೆಸಲು ಉಪಯೋಗವಾಗುವಂತಹ ಹಲವಾರು ವಿಚಾರಗಳನ್ನು ತಿಳಿಸಿದರು.

“ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಡಿ ನಮ್ಮ ಸಂಘವನ್ನೂ ಸೇರ್ಪಡಿಸಿ ನಮಗೂ ಎಲ್ಲ ರೀತಿಯ ಕಲಾವಿದರಿಗೆ ಸಿಗುವ ಮೂಲಸೌಕರ್ಯ ಕಲ್ಪಿಸಬೇಕೆಂಬುದು ನಮ್ಮ ಸಂಘದ ಒತ್ತಾಯವಾಗಿದೆ.”

**– ರಮೇಶ ಚವ್ಹಾಣ,ಅಧ್ಯಕ್ಷರು,** ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘ

ಪ್ರಾಸ್ತಾವಿಕವಾಗಿ ಮಾತನಾಡಿದ ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ರಮೇಶ ಚವ್ಹಾಣ, ನಾವು ತಾಲೂಕು, ಜಿಲ್ಲೆ, ರಾಜ್ಯ ಮಟ್ಟದಲ್ಲಿ ಸಂಘಟನೆ ಗಟ್ಟಿಗೊಳಿಸಬೇಕಾಗಿದೆ. ನಮ್ಮ ವೃತ್ತಿ ಸುಮಾರು 187ವರ್ಷಗಳಷ್ಟು ಹಳೆಯದಾಗಿದೆ. ಈ ರಂಗಕ್ಕೆ ಸರ್ಕಾರ ಅಕಾಡೆಮಿ ರಚನೆ ಮಾಡದೆ, ನಮ್ಮ ಛಾಯಾಗ್ರಾಹಕರನ್ನು ಗುರುತಿಸದೇ ಸರ್ಕಾರ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದೆ. ನಾವೆಲ್ಲರೂ ಸಂಘವನ್ನು ಬಲಿಷ್ಠಗೊಳಿಸಿ ಕರ್ನಾಟಕ ಛಾಯಾಗ್ರಹಣ ಅಕಾಡೆಮಿ ರಚನೆ ಮಾಡುವಂತೆ ಒತ್ತಾಯಿಸುವುದು ಅನಿವಾರ್ಯವಾಗಿದೆ ಎಂದರು.

ಸಮಾರಂಭದಲ್ಲಿ ಜಿಲ್ಲೆಯ ಹಿರಿಯ ಛಾಯಾಗ್ರಾಹಕರುಗಳಾದ ವಿಜಯಪುರದ ರವೀಂದ್ರ ಪೂಜಾರಿ, ಮಹೇಶ ಬಾಗಿ, ವಿವೇಕಾನಂದ ಅಕ್ಕಿ, ಸಿಂದಗಿಯ ಚಂದ್ರಕಾಂತ (ಪುಟ್ಟು) ಸಂಗಮ, ಇಂಡಿಯ ಮಹಮ್ಮದ್ ಇಸಾಕ್ ಲಾಳಸಂಗಿ, ಆಲಮೇಲದ ಪ್ರಭಾಕರ ನೆಲವಡೆ, ದೇವರ ಹಿಪ್ಪರಗಿಯ ಶಶೀಧರ ಆಲಗೂರ ಅವರ ಸೇವೆಯನ್ನು ಗುರುತಿಸಿ ಜಿಲ್ಲಾ ಛಾಯಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಎಸ್.ಎಸ್.ಎಲ್.ಸಿ ದ್ವಿತಿಯ ಪಿಯೂಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಛಾಯಾಗ್ರಾಹಕರ ಮಕ್ಕಳಾದ ಐಶ್ವರ್ಯ ಹಣಮಂತಸಿಂಗ್ ರಜಪೂತ, ಭವಾನಿ ನೇಮಿನಾಥ ನೇಜ, ಪ್ರಜ್ವಲ ಶೇಖಪ್ಪಾ ನ್ಯಾಮಗೊಂಡ, ಪ್ರಿಯಾ ಪಂಡಿತ್ ಬಿರಾದಾರ, ಸಚೀನ ಮೌನೇಶ ಬಡಿಗೇರ ಇವರಿಗೆ ಗೌರವಧನ, ಪ್ರಮಾಣಪತ್ರ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ವೇದಿಕೆಯಲ್ಲಿ ಛಾಯಾಗ್ರಾಹಕರ ಸಂಘದ ವಿವಿದ ತಾಲೂಕು ಅಧ್ಯಕ್ಷರಾದ ಜಂಗಲಿಬಾಷಾ ಮುಜಾವರ ಸಂಗಯ್ಯ ಮಠಪತಿ, ಸಿದ್ದು ಕುದುರೆ, ಶಿವರುದ್ರಯ್ಯ ಹಿರೇಮಠ, ಪರಶುರಾಮ ಗುಳ್ಳೂರ ಹಾಗೂ ಹಿರಿಯ ಛಾಯಾಗ್ರಾಹಕ ಮಡಿವಾಳಪ್ಪಾ ಪಾಟೀಲ ಇದ್ದರು.

ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದ ಪದಾಧಿಕಾ-ರಿಗಳಾದ ಸತೀಶಕುಮಾರ ಕಲಾಲ, ಪ್ರಶಾಂತ್ ಪಟ್ಟಣಶೆಟ್ಟಿ, ರಾಜುಸಿಂಗ್ ರಜಪೂತ, ಗುರುಬಾಳಪ್ಪ ಗಲಗಲಿ, ಮಲ್ಲಿಕಾರ್ಜುನ ಪಾರ್ವತಿ, ಪವನಕುಮಾರ



ಕರ್ನಾಟಕ ಛಾಯಾಚಿತ್ರಗ್ರಾಹಕರ ಸಂಘದ ನಿರ್ದೇಶಕ ನಾಗರಾಜ ಟಿ. ಸಿ. ಮತ್ತು ರವಿಕಿರಣ ಅವರು ಛಾಯಾಗ್ರಾಹಕ ವೃತ್ತಿಯಲ್ಲಿ ಸುಮಾರು ವರ್ಷ ಸಾಗಿದ್ದೆವೆ, ಸರಕಾರ ನಮ್ಮನ್ನು ಗುರುತಿಸುವಲ್ಲಿ ಮರೆತಿದೆ. ಎಲ್ಲರಿಗೂ ಸಿಗುವ ಸೌಲಭ್ಯ ನಮಗೂ ಸಿಗುವಂತಾಗಲಿ, ಸರಕಾರದಿಂದ ಛಾಯಾಗ್ರಾಹಕರಿಗೂ ಮಾಶಾಸನ ದೊರೆಯುಂತೆ ಆದೇಶ ಮಾಡಲಿ ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ಮುಂದಿನ ತಿಂಗಳು ಬೆಂಗಳೂರಿನಲ್ಲಿ ನಡೆಯುವ ಅಂತರರಾಷ್ಟ್ರೀಯ ವಸ್ತುಪ್ರದರ್ಶನದ ಬಗ್ಗೆ ಮಾಹಿತಿ ನೀಡಿ ಪ್ರದರ್ಶನದ ಪ್ರಚಾರ ಅಭಿಯಾನ ಕ್ಕೆ ಚಾಲನೆ ನೀಡಿ, ಎಲ್ಲ ಛಾಯಾಗ್ರಾಹಕರು ಪ್ರದರ್ಶನದ ಲಾಭ ಪಡೆಯಲು ತಿಳಿಸಲಾಯಿತು.

ಅಂಗಡಿ, ಸಂಜೀವ್ ಕುಂಬಾರ, ಹಿರಿಯ ಕಲಾವಿದರಾದ ಪಿ.ಎಸ್.ಕಡೆಮನಿ, ಬಿ.ಎಸ್. ಪಾಟೀಲ, ಪಿಂಟು ಕರ್ವಾ, ಉಮೇಶ ಹಿರೇದೆಸಾಯಿ, ಕಿರಣ ಸುಭಾಸ ಅಕ್ಕಿ, ಸಮೀರ ಅಥಣಿ, ಸದಾನಂಧ ದಾರಫಳ, ಆನಂದ ಮಹಾಂತಮಠ, ರಮೇಶ ಮ್ಯೆದರಗಿ, ಶಶಿಕುಮಾರ ಕುಂಬಾರ. ಕಿಶೋರ ಖಂಡಾಗಳೆ, ಬಾಳು ಕಲಾಲ, ಚಂದ್ರಶೇಖರ ವಡ್ಡರ, ಸುನೀಲಗೌಡ ಬಿರಾದಾರ, ಗೌಡಪ್ಪಗೌಡ ಬಿರಾದಾರ, ಸುಗುರೇಶ ಗುಲ್ಫಿ, ಅನಂತ ಭೋಸಲೆ, ಸುಭಾಶ ಪವಾರ, ಸಂಗನಗೌದ ಬಿರಾದಾರ. ಸದಾಶಿವ ಪವಾರ, ಗಣೇಶ ಶಿಂದೆ, ಪುಟ್ಟು ಕುಲಕರ್ಣಿ, ಇಕಬಾಲ ಕಲಾದಗಿ, ಅಕ್ಷಯ ಪೋತೆ ಸೇರಿದಂತೆ ಅನೇಕರಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಸುರೇಶ ಬಿಜಾಪುರ ನೆರವೇರಿಸಿದರು.

# ಲಿಖಿತ ಪರೀಕ್ಷೆಗಳ ಫಲಿತಾಂಶ ಬೇಗ ಪ್ರಕಟಿಸಲು ಶಾಸಕ ಯತ್ನಾಳ ಆಗ್ರಹ

**ಉದಯರಶ್ಮಿ ನ್ಯೂಸ್**

ವಿಜಯಪುರ: 245 ಸಿಟಿಐ ಮತ್ತು 545 ಸಿವಿಲ್ ಪಿ.ಎಸ್.ಐ ಹುದ್ದೆಗಳ ನೇಮಕಾತಿ ಸೇರಿದಂತೆ ಈಗಾಗಲೇ ನಡೆದಿರುವ ಲಿಖಿತ ಪರೀಕ್ಷೆಗಳ ಫಲಿತಾಂಶವನ್ನು ಕರ್ನಾಟಕ ಲೋಕಸೇವಾ ಆಯೋಗ ಆದಷ್ಟು ಬೇಗ ಪ್ರಕಟಿಸಬೇಕು ಎಂದು ನಗರ ಶಾಸಕ ಬಸನಗೌಡ ರಾ.ಪಾಟೀಲ ಯತ್ನಾಳ ಒತ್ತಾಯಿಸಿದ್ದಾರೆ.

ಈ ಕುರಿತಂತೆ ಎಕ್ಸ್ ಖಾತೆಯಲ್ಲಿ ಟ್ವಿಟ್ ಮಾಡಿರುವ ಅವರು, ಈ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳು ಪಿಸಿ (ಸಿವಿಲ್/ಸಿಎ-ಆರ್/ಡಿಎಆರ್) ಹುದ್ದೆಯಿಂದ ದೂರ ಉಳಿಯುತ್ತಾರೆ. ಇದರಿಂದ ಬೇರೆಯವ-ರಿಗೂ ಅವಕಾಶ ಸಿಗುತ್ತದೆ ಹಾಗೂ ತೇರ್ಗಡೆಯಾದವರಿಗೆ ಮತ್ತೆ ಪರೀಕ್ಷೆ ಬರೆಯುವ ಅವಶ್ಯಕತೆ ಇರುವುದಿಲ್ಲ.



ಪಿ.ಸಿ ಪರೀಕ್ಷೆಯ ಫಲಿತಾಂಶ ಮೊದಲು ಬಿಡುಗಡೆಯಾಗಿ, ನಂತರ ಪಿ.ಎಸ್.ಐ ಆಗಿ ಎರಡರಲ್ಲೂ ತೇರ್ಗಡೆಯಾದವರು ಪಿ.ಸಿ ಬಿಟ್ಟು ಪಿ.ಎಸ್.ಐ ಆಯ್ಕೆ ಮಾಡಿಕೊಳ್ಳುತ್ತಾರೆ. ಇದರಿಂದ ಮತ್ತೆ ಬ್ಯಾಕ್ಲಾಗ್ ಆಗಿ ಸರ್ಕಾರಕ್ಕೂ ಅಭ್ಯರ್ಥಿಗಳಿಗೂ ತೊಂದರೆಯಾಗುವುದು ಖಚಿತ.

ಒಂದು ಉದ್ಯೋಗ ಸಿಗುವುದ-ರಿಂದ ಒಂದು ಮನೆಗೆ ಸಾಕಷ್ಟು ಆರ್ಥಿಕ ನೆರವಾಗುತ್ತದೆ. ಅಭ್ಯರ್ಥಿಯ ಭವಿಷ್ಯ ಸಧೃಡವಾಗುತ್ತದೆ. ಪರೀಕ್ಷೆ ಫಲಿತಾಂಶದ ವಿಳಂಬ, ಅನಿಶ್ಚಿತತೆ, ಅವೈಜ್ಞಾನಿಕ ವೇಳಾಪಟ್ಟಿ, ಅಭ್ಯರ್ಥಿ ಇರುವ ಊರಿಂದ ಬೇರೆ ಊರಿಗೆ ಪರೀಕ್ಷೆ ಸೆಂಟರ್ ನಿಗದಿ ಮಾಡುವುದನ್ನು ಬಿಟ್ಟು ಪರೀಕ್ಷಾರ್ಥಿಗಳ ಪರ ಆಯೋಗ ಕೆಲಸ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

# ಶಾಲಾ ಆವರಣದಲ್ಲಿ ಮಳೆ ನೀರು ಸಂಗ್ರಹ :ಮಕ್ಕಳ ಪ್ರವೇಶಕ್ಕೆ ಅಡ್ಡಿ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಗ್ರಾಮದಲ್ಲಿ ಸುರಿದ ಮಳೆ ಶಾಲಾ ಆವರಣ ಹಾಗೂ ಕೊಠಡಿಗಳಲ್ಲಿ ನಿಂತು ಮಕ್ಕಳ ಆಟಪಾಠ ಸೇರಿದಂತೆ ಎಲ್ಲ ಚಟುವಟಿಕೆಗಳಿಗೆ ಅಡ್ಡಿಯಾಯಿತು.

ತಾಲ್ಲೂಕಿನ ಕಡ್ಲೇವಾಡ ಪಿಸಿಎಚ್‌ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲಾ ಆವರಣ ಬುಧವಾರ ಸುರಿದ ಮಳೆಯ ನೀರಿನಿಂದ ತುಂಬಿದ್ದು, ಮಕ್ಕಳ ಶಾಲಾ ಪ್ರವೇಶ, ಪ್ರಾರ್ಥನೆ ಹಾಗೂ ತರಗತಿಗಳಿಗೆ ತೊಂದರೆಯಾಯಿತು. ಮಳೆ ನೀರು ಆವರಣದಲ್ಲಿ ನಿಂತ ಪರಿಣಾಮ ಮಕ್ಕಳು ಶಾಲಾ ಕೋಣೆಗಳಿಗೆ ಪ್ರವೇಶಿಸದಂತಾಗಿ-ತ್ತು. ಜೊತೆಗೆ ಬೆಳಿಗ್ಗೆ ಆರಂಭದಲ್ಲಿ ಮಕ್ಕಳು ಪ್ರಾರ್ಥನೆ ಹಾಗೂ ರಾಷ್ಟ್ರಗೀತೆ ಹೇಳಲು ಅವಕಾಶ ಇಲ್ಲದಂತಾಯಿತು. ಇನ್ನೂ ನಾಲ್ಕು ಕೊಠಡಿಗಳು ಸಹ ಮಳೆ ನೀರಿನಿಂದ ಸೋರಿಕೆಯಾಗಿ ಪಾಠಗಳು ನಡೆಯದಂತಾದವು. ಇದರಿಂದ ಶಿಕ್ಷಕರು ಸಹ ಅಸಹಾಯಕರಾಗಿ ಮಕ್ಕಳೊಂದಿಗೆ ಸೇರಿ ಆವರಣದ ನೀರು ಖಾಲಿಮಾಡಲು ಹರಸಾಹಸ ಪಟ್ಟರು.

ಶಾಲಾ ಆವರಣದಲ್ಲಿ ಮಳೆ ನೀರು ನಿಲ್ಲವುದು ಹಾಗೂ ಕೋಣೆಗಳ ಸೋರುವಿಕೆ ಕುರಿತಂತೆ ಗ್ರಾಮ ಪಂಚಾಯಿತಿಗೆ ಹಲವು ಬಾರಿ ಮನವಿ ಮಾಡಿದ್ದರು ಸಹ ಗ್ರಾಮವನ್ನು ಪ್ರತಿನಿಧಿಸುವ ಐವರು ಗ್ರಾಮ ಪಂಚಾಯಿತಿ ಸದಸ್ಯರು ಯಾವುದೇ ಕ್ರಮಕ್ಕೆ ಮುಂದಾಗದೇ ಇರುವುದು ಪ್ರತಿವರ್ಷ ಮಳೆಗಾಲದಲ್ಲಿ ಮಕ್ಕಳು ಈ ಪರಿಸ್ಥಿತಿ ಎದುರಿಸುವಂತಾಗಿದೆ ಎಂದು ಮಕ್ಕಳ ಪಾಲಕರು ವಾಸ್ತವ ಅಂಶ ಬಿಚ್ಚಿಟ್ಟರು.



ಸ್ಥಳೀಯ ಆಡಳಿತ ಶಾಲಾ ಆವರಣದಲ್ಲಿ ಮಳೆನೀರು ನಿಲ್ಲದಂತೆ ಕೂಡಲೇ ಅಗತ್ಯ ಕ್ರಮ ಕೈಗೊಂಡು ಕೊಠಡಿಗಳ ಸೋರುವಿಕೆಗೆ ಕಡಿವಾಣ ಹಾಕಿ ಮಕ್ಕಳ ಕಲಿಕೆಗೆ ಸಹಕಾರ ನೀಡಬೇಕು ಎಂದು ಪಾಲಕರಾದ ಸಾಯಿಕುಮಾರ ಬಿಸನಾಳ, ವಿಠ್ಠಲ ದೇಗಿನಾಳ, ಅಶೋಕ ಸೂಳಿಭಾವಿ, ಮಲ್ಲು ಸವುಳಿ, ಶಿವಪ್ಪ ಉತ್ನಾಳ, ಗುರುನಾಥ ಗೌಂಡಿ, ದಸ್ತಗೀರಸಾಬ್ ಮುಲ್ಲಾ, ಕಾಂತು ಕನ್ನೊಳ್ಳಿ ಆಗ್ರಹಿಸಿದರು.

# ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪ್ರತಿಭಾ ಕಲೋತ್ಸವ ಸಹಕಾರಿ :ಸಿಂದಗಿ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಮಕ್ಕಳ ಶೈಕ್ಷಣಿಕ ಪ್ರಗತಿ ಹಾಗೂ ಸಾಂಸ್ಕೃತಿಕ ಕಲೆಗಳ ಅನಾವರಣಕ್ಕೆ ಪ್ರತಿಭಾ ಕಲೋತ್ಸವ ಸಹಕಾರಿಯಾಗಬಲ್ಲದು ಎಂದು ತಹಶೀಲ್ದಾರ ಪ್ರಕಾಶ ಸಿಂದಗಿ ಹೇಳಿದರು.



ಪಟ್ಟಣದ ಸರ್ಕಾರಿ ಉರ್ದು ಮಾದರಿ ಪ್ರಾಥಮಿಕ ಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಸಿಂದಗಿ ಹಾಗೂ ಸಮೂಹ ಸಂಪನ್ಮೂಲ ಕೇಂದ್ರ ದೇ.ಹಿಪ್ಪರಗಿ ಅಡಿಯಲ್ಲಿ ಬುಧವಾರ ಜರುಗಿದ ದೇವರಹಿಪ್ಪರಗಿ ಉರ್ದು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು. ಮಕ್ಕಳಿಗೆ ಪಠ್ಯಗಳ ಕಲಿಕೆಯ ಜೊತೆಗೆ ಹೊಸದಾದ ಜೀವನ ಕೌಶಲ್ಯಗಳನ್ನು ಹೊಂದಲು ಇದು ಉತ್ತಮ ವೇದಿಕೆಯಾಗಿದೆ ಎಂದರು.

ಖ್ಯಾತ ವಕೀಲ ಎ.ಎಮ್. ತಾಂಬೋಳಿ ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತರಲು ಪ್ರತಿಭಾ ಕಲೋತ್ಸವ ಅವಕಾಶ ಒದಗಿಸುತ್ತದೆ. ಜೊತೆಗೆ ಮಕ್ಕಳ ವ್ಯಕ್ತಿತ್ವ ರೂಪಿಸಲು ಶಿಕ್ಷಕರಿಗೆ ಹಾಗೂ ಪಾಲಕರಿಗೆ ಅವಕಾಶ ಕಲ್ಪಿಸಿ ಪ್ರೋತ್ಸಾಹಿಸುತ್ತದೆ ಎಂದರು.

ಮಹಿಳಾ ಪಿಎಸ್‌ಐ ಪಿ.ಎಸ್. ಚೌರ ಮಾತನಾಡಿ, ಸರ್ಕಾರದ ಈ ಕಾರ್ಯಕ್ರಮ ಉತ್ತಮವಾಗಿದ್ದು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಉತ್ತಮ ವೇದಿಕೆಯಾಗುತ್ತವೆ ಎಂದರು. ನಂತರ ಮಕ್ಕಳಿಂದ ಕಂಠಪಾಠ, ಕವ್ವಾಲಿ, ಕ್ವಿಜ್, ಛದ್ಮವೇಷ, ಕಥೆ ಹೇಳುವುದು, ಮಿಮಿಕ್ರಿ, ದೇಶಭಕ್ತಿ ಗೀತೆಗಳು ಮೂಡಿಬಂದವು.

ತಾಲ್ಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎ.ಎಚ್.ವಾಲೀಕಾರ, ಪಟ್ಟಣ ಪಂಚಾಯಿತಿ ಸದಸ್ಯ ಬಶೀರ್‌ಅಹ್ಮದ್ ಕಸಾಬ್, ಯುವಕಾಂಗ್ರೆಸ್ ಘಟಕದ ಅಧ್ಯಕ್ಷ ಮುನೀರ್ ಅಹ್ಮದ್ ಬಿಜಾಪೂರ, ಅಂಜುಮನ್ ಇಸ್ಲಾಮ್ ಕಮೀಟಿ ಉಪಾಧ್ಯಕ್ಷ ಮಹಮ್ಮದ್ ಪಾನಪರೋಷ್, ಕಾರ್ಯದರ್ಶಿ ಅಬ್ದುಲ್‌ಸತ್ತಾರ ಉಪರಫರ್, ಎಸ್‌ಡಿಎಮ್‌ಸಿ ಅಧ್ಯಕ್ಷ ಮುಸ್ತಫಾ ಮುಲ್ಲಾ, ಸದಸ್ಯ ಅಮೀರ್ ಮಕಾಂದಾರ, ಸಿಆರ್‌ಪಿ ಎಫ್.ಎನ್.ನಧಾಫ್, ಮುಖ್ಯಶಿಕ್ಷಕ ಮಹಮ್ಮದ್‌ರಫೀಕ್ ತಾಂಬೋಳಿ, ಹೈದರಸಾಬ್ ಮುಲ್ಲಾ, ಯಾಸೀನ್ ಗರಡಿಮನಿ, ನವಾಜ್, ಆರ್.ಎಮ್. ಹಳ್ಳಿ, ಎಂ.ಎ.ಹೆಬ್ಬಾಳ, ಮಕಬೂಲ್ ಬಾಗವಾನ್, ಮುರ್ತುಜಾ ತಾಂಬೋಳಿ ಸೇರಿದಂತೆ ಸಿಬ್ಬಂದಿ ಹಾಗೂ ಮಕ್ಕಳು ಇದ್ದರು.

# ನವೋದಯ ವಿದ್ಯಾಲಯಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಭೇಟಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಆಲಮಟ್ಟಿಯ ಜವಾಹರ ನವೋದಯ ವಿದ್ಯಾಲಯಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಬುಧವಾರ ಭೇಟಿ ನೀಡಿ ಅಲ್ಲಿನ ಸ್ಥಿತಿಗತಿಗಳ ಕುರಿತು ಪರಿಶೀಲನೆ ನಡೆಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.



ವಿದ್ಯಾಲಯದ ಬೋಧನಾ ಗುಣಮಟ್ಟವನ್ನು ಹೆಚ್ಚಿಸಿ ಫಲಿತಾಂಶ ಹೆಚ್ಚಳಕ್ಕೆ ಕ್ರಮ ವಹಿಸಬೇಕು. ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವ ಬೆಳವಣಿಗೆ ದೃಷ್ಟಿಯಿಂದ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೆ ಆದ್ಯತೆ ನೀಡಿ, ಮಕ್ಕಳ ಕೌಶಲ್ಯತೆಯನ್ನು ಹೆಚ್ಚಿಸಲು ಕ್ರಿಯಾತ್ಮಕ ಚಟುವಟಿ-ಕೆಗಳನ್ನು ಹಮ್ಮಿಕೊಳ್ಳಬೇಕು.

ಪಾಠ ಮಾಡಿ ಮಕ್ಕಳಿಗೆ ಪ್ರೇರಣೆಯಾದ ಡಿಸಿ ಹಾಗೂ ಸಿಇಒ : ಈ ಸಂದರ್ಭದಲ್ಲಿ 10ನೇ ತರಗತಿಯ ಕೊಠಡಿಗೆ ತೆರಳಿ ವಿದ್ಯಾರ್ಥಿ ಗಳಿಗೆ ಭೂಗೋಳ, ಗಣಿತ,ಸಮಾಜ ವಿಜ್ಞಾನ ಸೇರಿದಂತೆ ಸಾಮಾನ್ಯ ಜ್ಞಾನದ ವಿಷಯದ ಬಗ್ಗೆ ಹಾಗೂ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾ-ರಿಗಳಾದ ರಿಷಿ ಆನಂದ ಅವರು ರೇಖಾಗಣಿತ ಹಾಗೂ ಇಂಗ್ಲೀಷ ವ್ಯಾಕರಣದ ಕುರಿತು ತಿಳಿಸಿಕೊಟ್ಟರು.

ವಿದ್ಯಾರ್ಥಿ ಜೀವನವನ್ನು ಸುಂದರವಾಗಿಸಿಕೊಳ್ಳಿ, ಜ್ಞಾನಾರ್ಜನೆ ಪಡೆದುಕೊಳ್ಳಲು ಅಧ್ಯಯನಶೀಲತೆ ರೂಢಿಸಿಕೊಳ್ಳಬೇಕು. ಪ್ರತಿನಿತ್ಯದ ಪಾಠಗಳನ್ನು ಶ್ರವಣ ಮಾಡುವ ಮೂಲಕ ಮನನ ಮಾಡಿಕೊಳ್ಳಬೇಕು. ಜೀವನ ಸುಂದರಗೊಳಿಸಿಕೊಂಡು ಕಲಿತ ಶಾಲೆ ತಮ್ಮ ಊರಿಗೆ ಕೀರ್ತಿ ತರಬೇಕು.ಪಾಠದೊಂದಿಗೆ ಆಟೋಟಗಳಲ್ಲಿ ಸಕ್ರೀಯವಾಗಿ ತೊಡಗಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ವಿದ್ಯಾಲಯದ ಪ್ರಾಂಶುಪಾಲರು ಸೇರಿದಂತೆ ಇತರ ಅಧಿಕಾರಿಗಳು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ :ಮಲಕ್ಕನ್ನವರ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಸಾಮಾಜಿಕ ಅರಣ್ಯ ಇಲಾಖೆ ಹಾಗೂ ತಾಲ್ಲೂಕು ಪಂಚಾಯಿತಿ ಇವರ ಸಹಯೋಗದಲ್ಲಿ ಪರಿಸರ ದಿನಾಚರಣೆ ಅಂಗವಾಗಿ "ತಾಯಿ ಹೆಸರಿನಲ್ಲಿ ಒಂದು ವೃಕ್ಷ ಅಭಿಯಾನ" ಜರುಗಿತು.



ಪಟ್ಟಣದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಗುರುವಾರ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಸಾಮಾಜಿಕ ವಲಯ ಅರಣ್ಯ ಅಧಿಕಾರಿ ಎಂ. ವೈ.ಮಲಕ್ಕನ್ನವರ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಪ್ರತಿಯೊಬ್ಬ ನಾಗರಿಕ ಕೂಡ ತನ್ನ ತಾಯಿ ಹೆಸರಿನಲ್ಲಿ ಒಂದು ಸಸಿಯನ್ನು ನೆಟ್ಟು ಅದನ್ನು ಪೋಷಿಸಿ, ಬೆಳೆಸುವ ಕಾರ್ಯ ಮಾಡಬೇಕು. ಜಿಲ್ಲೆಯಾದ್ಯಂತ ವ್ಯಾಪಕವಾಗಿ ಅರಣ್ಯದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಹಾಗೂ ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ ಎಂಬುದನ್ನು ಅರಿತುಕೊಳ್ಳುವ ಉದ್ದೇಶದಿಂದ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಉಪವಲಯ ಅರಣ್ಯ ಅಧಿಕಾರಿ ಆರ್.ಎಚ್.ಬಿರಾದಾರ, ಐಇಸಿ ಸಂಯೋಜಕ ಸಿದ್ದು ಕಾಂಬಳೆ, ಜಿ.ಎಸ್.ರೋಡಗಿ, ಕಿರಣ ಪಾಟೀಲ, ಆನಂದ ಮುದೋಡಗಿ, ಪರಶುರಾಮ ಗುಬ್ಬೇವಾಡ, ಭೀಮರಾಯ ಭಾವಿಕಟ್ಟಿ, ಭಾರತಿ ಕೋಳಿ, ಭಾರತಿ ಸೇರಿದಂತೆ ಅರಣ್ಯ ಇಲಾಖೆ ಹಾಗೂ ತಾಲ್ಲೂಕು ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.

# ವಿಜಯಪುರ: ಮೂಲ ಸೌಕರ್ಯಗಳಿಂದ ವಂಚಿತ ವಾರ್ಡ ನಂ.20

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಬಡ್ತಿ ಹೊಂದಿ ಸುಮಾರು 7 ವರ್ಷಗಳು ಕಳೆಯುತ್ತಾ ಬಂದಿದ್ದರೂ ಸಹ ವಿಜಯಪುರ ನಗರದ ಕೆಲವೊಂದು ವಾರ್ಡಗಳಲ್ಲಿ ಅಭಿವೃದ್ದಿ ಎನ್ನುವದು ಮರಿಚಿಕ್ಕೆಯಾಗಿದೆ. ಇದಕ್ಕೆ ನಿರ್ದಶನ ಎಂಬಂತೆ ವಾರ್ಡ ನಂ. 20ರ ಮುಬಾರಕ ಕಾಲನಿ, ಟಿಪ್ಪು ಸುಲ್ತಾನ ಮ್ಯಾರೇಜ್ ಹಾಲ್‌ಹತ್ತಿರ, ಜೆ.ಎಂ.ರೋಡದಲ್ಲಿ ಬರುವ ರಸ್ತೆಗಳು ಸಂಪೂರ್ಣವಾಗಿ ಹದಗೆಟ್ಟಿದ್ದು, ಇನ್ನುವರೆಗೆ ಡಾಂಬರೀಕರಣ ರಸ್ತೆಯಾಗಲಿ, ಸಿ.ಸಿ. ರಸ್ತೆ ಆಗಿರುವದಿಲ್ಲ. ಇನ್ನು ಈ ರಸ್ತೆಯ ಮೂಲಕ ಇಕ್ರಾ ಶಾಲೆ, ಅಂಜುಮನ್ ಪದವಿ ಪೂರ್ವ ಕಾಲೇಜು, ಅಲ್‌ಹುದಾ ಶಾಲೆ, ಎ1 ಶಾಲೆಗಳಿಗೆ ಹೋಗುವ ಚಿಕ್ಕ ಮಕ್ಕಳಿಗೆ ಹಾಗೂ ಶಾಲಾ ಕಾಲೇಜು ವಿದ್ಯಾರ್ತಿಗಳಿಗೆ ದಿನಂಪ್ರತಿ ಹಲವಾರು ಸಮಸ್ಯೆಗಳು ಎದುರಿಸುವ ಪರಿಪಾಠ ಬಂದಿದೆ. ಇನ್ನು ಮಳೆಗಾಲದಲ್ಲಿ ಎಲ್ಲೆಂದರಲ್ಲಿ ರೊಜ್ಜು, ಕೆಸರು ಹೆಚ್ಚಾಗುತ್ತದೆ. ಇದರಿಂದ ಚಿಕ್ಕ ಮಕ್ಕಳು ಕೆಸರಿನ ಗುಂಡಿಗಳಿಗೆ ಬಿದ್ದು, ಸಮಸ್ಯೆಗಳಿಗೆ ಈಡಾಗಿದ್ದಾರೆ. ಇನ್ನು ಈ ಬಡಾವಣೆಯಲ್ಲಿ ಸರಿಯಾದ ರಸ್ತೆ ದೀಪಗಳಿಲ್ಲ, ಡ್ರೈನೇಜ್, ಇನ್ನು ಹಲವಾರು ಸಮಸ್ಯೆಗಳು ಇದ್ದು,ಈ ಕುರಿತು ವಾರ್ಡ ಸದಸ್ಯರಿಗೆ ಮಹಾನಗರ ಪಾಲಿಕೆ ಮಹಾಪೌರರಿಗೆ ಹಾಗೂ ಆಯುಕ್ತರಿಗೆ ಈ ಕುರಿತು ಗಮನಕ್ಕೆ ತಂದರೂ ಸಹ ವಾರ್ಡ ನಂ. 20ರ ಅಭಿವೃದ್ದಿ ಕೆಲಸಗಳಿಗೆ ಬಜೆಟ್ ಇಲ್ಲವೆಂದು ಹಾರಿಕೆ ಉತ್ತರ ನೀಡುತ್ತಿದ್ದಾರೆ. ಆದ್ದರಿಂದ ವಾರ್ಡ ನಂ. 20ರ ಬಡಾವಣೆಯ ಜನರಿಗೆ ಅನುಕೂಲ ಆಗುವಂತೆ ಶೀಘ್ರದಲ್ಲಿ ರಸ್ತೆ, ವಿದ್ಯುತ್ ದೀಪ, ಒಳಚರಂಡಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಸಾರ್ವಜನಿಕರ ಕಷ್ಟಗಳಿಗೆ ಸ್ಪಂದಿಸಬೇಕೆಂದು ಮಾನವ ಹಕ್ಕುಗಳ ಕಲ್ಯಾಣ ಮಂಡಳಿ ಕಾರ್ಯದರ್ಶಿ ನಿಜಾಮುದ್ದೀನ ಹಿರಿಯಾಳ ತಿಳಿಸಿದ್ದಾರೆ.



## ವಿಜಯಪುರದಲ್ಲಿ ಬಿಜೆಪಿ ಜಿಲ್ಲಾ ಘಟಕದಿಂದ ಬೃಹತ್ ಪ್ರತಿಭಟನಾ ಮೆರವಣಿಗೆ

# ಸಿಎಂ ಸಿದ್ದರಾಮಯ್ಯನವರ ಅಸಲಿ ಮುಖ ಹೊರಬಿದ್ದಿದೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಂವಿಧಾನಿಕ ಹುದ್ದೆಯಲ್ಲಿರುವ ಗೌರವಾನ್ವಿತ ರಾಜ್ಯಪಾಲರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಕಾಂಗ್ರೆಸ್ ಸಚಿವರು, ಶಾಸಕರು, ಮುಖಂಡರ ವರ್ತನೆ ಖಂಡಿಸಿ, ವಾಲ್ಮೀಕಿ ಹಗರಣ, ಮುಡಾ ಹಗರಣದ ಸೇರಿದಂತೆ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ, ದುರಾಡಳಿತ ವಿರೋಧಿಸಿ ಹಾಗೂ ಕಾರಣಿಕರ್ತರಾದ ಸಿಎಂ ಸಿದ್ದರಾಮಯ್ಯನವರ ರಾಜೀನಾಮೆಗೆ ಒತ್ತಾಯಿಸಿ ನಗರದಲ್ಲಿ ಗುರುವಾರ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಘಟಕದ ವತಿಯಿಂದ ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಯಿತು.



ನಗರದ ಸಿದ್ದೇಶ್ವರ ದೇವಸ್ಥಾನ ಆವರಣದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆ ಜಿಲ್ಲಾಧಿಕಾ-ರಿಗಳ ಕಚೇರಿಗೆ ತೆರಳಿ, ಪ್ರತಿಭಟನೆ ನಡೆಸಿ, ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಜಿಲ್ಲಾಧ್ಯಕ್ಷ ಆರ್. ಎಸ್.ಪಾಟೀಲ ಕೂಚಬಾಳ ಮಾತನಾಡಿ, ದಲಿತ ರಾಜ್ಯಪಾಲರು ಎನ್ನುವ ಕಾರಣಕ್ಕೆ ಕಾಂಗ್ರೆಸ್ ಸರ್ಕಾರದ ಸಚಿವರು, ಶಾಸಕರು, ಮುಖಂಡರು ಮನಸ್ಸಿಗೆ ಬಂದಂತೆ ಅವಹೇಳನಕಾರಿಯಾಗಿ ಹಾಗೂ ಏಕವಚನ ಪ್ರಯೋಗ ಮಾಡುವ ಮೂಲಕ ಸಂವಿಧಾನ ಹುದ್ದೆಯಲ್ಲಿರುವ ಗೌರವಾನ್ವಿತ ರಾಜ್ಯಪಾಲರನ್ನು ನಿಂದಿಸಿರುವುದು ಖಂಡನೀಯ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳ ಎದುರಲ್ಲೇ ಈ ರೀತಿಯ ಹೀನ ವರ್ತನೆ ನಡೆದರೂ, ಅವರ ವಿರುದ್ಧ ಕ್ರಮಗೊಂಡಿಲ್ಲ. ಇದರಿಂದ ತಿಳಿಯುತ್ತದೆ ನಿಜವಾದ ದಲಿತ ವಿರೋಧಿಗಳು, ಸಂವಿಧಾನ ವಿರೋಧಿಗಳು ಯಾರು ಎನ್ನುವುದು. ಕೂಡಲೇ ಅವಮಾನಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ವಾಲ್ಮೀಕಿ ಹಗರಣದಲ್ಲಿ ಅವ್ಯವಹಾರ ಆಗಿರುವುದು ನಿಜವೆಂದು ಒಪ್ಪಿಕೊಂಡಿದ್ದಾರೆ. ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಗಳ ಕುಟುಂಬವೇ ಸಿಲುಕಿರುವುದು ದಾಖಲೆಗಳಿಂದ ಸ್ಪಷ್ಟವಾಗಿದೆ. ಈ ಮೂಲಕ ಸಿದ್ದರಾಮಯ್ಯನವರ ಅಸಲಿ ಮುಖ ಹೊರ ಬಂದಿದೆ. ಹೀಗಾಗಿ ಕೂಡಲೇ ರಾಜೀನಾಮೆ ನೀಡಿ, ತನಿಖೆಗೆ ಸಹಕಾರ ನೀಡಬೇಕು. ರಾಜ್ಯಪಾಲರಿಗೆ ಗೌರವ ನೀಡುವ ಪದ್ಧತಿ ಬೆಳೆಸಿಕೊಳ್ಳಬೇಕು ಎಂದು ಆಗ್ರಹಿಸಿದರು.

ಮುಖಂಡರಾದ ವಿಜುಗೌಡ ಪಾಟೀಲ, ಎಸ್.ಕೆ.ಬೆಳ್ಳುಬ್ಬಿ ಮಾತನಾಡಿದರು.

ಮುಖಂಡರಾದ ರಮೇಶ ಭೂಸನೂರ, ಅರುಣ ಶಹಾಪುರ, ಈರಣ್ಣ ಪಟ್ಟಣಶೆಟ್ಟಿ, ಪ್ರಭುಗೌಡ ಅಸ್ಕಿ,ಅನಿಲ್ ಜಮಾದಾರ್ ಸಿದ್ದು ಬುಳ್ಳಾ, ಮಂಜುನಾಥ್ ಮೀಸೆ, ಗುರುಲಿಂಗಪ್ಪ ಅಂಗಡಿ, ಮಲ್ಲಿಕಾರ್ಜುನ್ ಪಟ್ಟಣಶೆಟ್ಟಿ , ಉಮೇಶ್ ಕೊಲ್ಕರ್, ಕಾಸುಗೌಡ ಬಿರಾದಾರ, ಸಂಜು ಐಹೊಳಿ, ಮಳುಗೌಡ ಬಿರಾದಾರ, ಮಹೇಂದ್ರ ನಾಯಕ, ಶಂಕರ ಹೂಗಾರ, ಎಂ.ಎಸ್.ಕರಡಿ, ರಾಜಶೇಖರ ಮಗಿಮಠ, ಶಿವರುದ್ರ ಬಾಗಲಕೋಟ, ಪ್ರೇಮಾನಂದ ಬಿರಾದಾರ, ರಾಜಶೇಖರ ಕು-ರಿಯವರ, ವಿಠ್ಠಲ ಹೊಸಪೇಟ, ಸ್ವಪ್ನಾ ಕಣಮುಚನಾಳ, ಕುಮಾರ ಗಡಗಿ, ಮಹೇಶ ಒಡೆಯರ, ವಿಕ್ರಮ ಗಾಯಕವಾಡ, ವಿಜಯ ಜೋಶಿ, ಮಡಿವಾಳ ಯಾಳವಾರ, ಅಶೋಕ ಬೆಲ್ಲದ, ದತ್ತಾ ಗೊಲಂಡೆ, ಲಕ್ಷ್ಮಣ ಜಾಧವ, ಪಾಂಡು ಸಾಹುಕಾರ ದೊಡಮನಿ, ರಾಹುಲ ಜಾಧವ, ಬಾಬು ಶಿರಶ್ಯಾಡ, ಲಕ್ಷ್ಮೀ ಕನ್ನೊಳ್ಳಿ, ಚಂದ್ರು ಚೌದರಿ, ಬಸ್ ಹೂಗಾರ್, ಮಲ್ಲಿಕಾರ್ಜುನ್ ಕಿವ್ಡಿ, ಸಂತೋಷ್ ಪಾಟೀಲ್, ಸಂಜೆ ಪಾಟೀಲ್ ಕನಮಡಿ, ಕೃಷ್ಣ ಗುನಾಲ್ಕರ್ ರಾಜೇಶ್ ತೋಸೆ ಕಾಂತು ಸಿಂಧೆ ಸೇರಿದಂತೆ ಮತ್ತಿತರರು ಇದ್ದರು.

# ಆ.25ರಂದು ಸಂಗೊಳ್ಳಿ ರಾಯಣ್ಣ ಜಯಂತಿ, ಪ್ರತಿಭಾ ಪುರಸ್ಕಾರ

**ಉದಯರಶ್ಮಿ ನ್ಯೂಸ್**

ಸಿಂದಗಿ: ಆ.25 ರವಿವಾರದಂದು ಬೆಳಿಗ್ಗೆ 10:00 ಗಂಟೆಗೆ ಪಟ್ಟಣದ ರಾಜರಾಜೇಶ್ವರಿ ಕಲ್ಯಾಣ ಮಂಟಪದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಜರುಗಲಿದೆ. ಬೆಳಿಗ್ಗೆ 9ಗಂಟೆಗೆ ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ರಾಜರಾಜೇಶ್ವರಿ ಕಲ್ಯಾಣ ಮಂಟಪದವರೆಗೆ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರ ಮೆರವಣಿಗೆ ಜರುಗುವದು. ಮೆರವಣಿಗೆಯ ಉದ್ದಕ್ಕೂ ಗುಂದಗಿ ಗ್ರಾಮದ ರೆಬಕಮ್ಮದೇವಿ ಡೊಳ್ಳಿನ ವಾಲಗ ಸಂಘ ಹಾಗೂ ಕೆರೂರ ಗ್ರಾಮದ ಬೀರಲಿಂಗೇಶ್ವರ ಡೊಳ್ಳಿನ ವಾಲಗ ಸಂಘದವರಿಂದ ಡೊಳ್ಳು ವಾದ್ಯ ವಾಲಗ ಸೇವೆ ಜರುಗಲಿದೆ ಎಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನೌಕರರ ಸಂಘದ ತಾಲೂಕಾಧ್ಯಕ್ಷ ರಾಯಪ್ಪ ಇವಣಗಿ ತಿಳಸಿದ್ದಾರೆ.

ಕಾರ್ಯಕ್ರಮದಲ್ಲಿ ಕಾಗಿನೆಲೆ ಮಹಾಸಂಸ್ಥಾನದ ತಿಂಥಣಿ ಬ್ರಿಡ್ಜ್ ಶಾಖಾಮಠದ ಸಿದ್ಧರಾಮಾನಂದಪುರಿ ಮಹಾಸ್ವಾಮಿಗಳು, ಗೋಳಸಾರದ ಅಭಿನವ ಪುಂಡಲಿಂಗ ಮಹಾಶಿವಯೋಗಿಗಳು ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸುವರು. ವಿಜಯಪುರದ ಶಾಲಾಶಿಕ್ಷಣ ಇಲಾಖೆಯ ಉಪ-ನಿರ್ದೇಶಕ ಎನ್. ಎಚ್.ನಾಗೂರ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಗೊಳ್ಳಿ ರಾಯಣ್ಣ ನೌಕರರ ಸಂಘದ ತಾಲೂಕಾಧ್ಯಕ್ಷ ರಾಯಪ್ಪ ಇವಣಗಿ ವಹಿಸುವರು. ವಿಜಯಪುರ ವಿಭಾಗೀಯ ಕೆ.ಕೆ. ಆರ್.ಟಿ.ಸಿ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರಬರ ಫೋಟೊ ಪೂಜೆಯನ್ನು ನೆರವೇರಿಸುವರು. ಸಿಂದಗಿಯ ಕೆ.ಪಿ.ಟಿ.ಸಿ.ಎಲ್ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಡಿ.ಎಂ.ಮೂಲಿಮನಿ ಮೆರವಣಿಗೆಗೆ ಚಾಲನೆ ನೀಡುವರು. ಅತಿಥಿಗಳಾಗಿ ಎಚ್.ಎಲ್.ಸಂಕ ಎಂ.ಎಂ.ತಡಲಗಿ, ಎ.ಆರ್. ಹೆಗ್ಗಣದೊಡ್ಡಿ, ಡಾ. ಬಿ.ಎಸ್. ಅಳ್ಳಿಚಂಡಿ ಹಾಗೂ ಬಿ.ವಾಯ್. ಗೌಡರ ಭಾಗವಹಿಸುವರು.

ಡೊಳ್ಳಿನ ಗಾಯನ ಕಲಾ ಸಂಘದ ರಾಜ್ಯಾಧ್ಯಕ್ಷ ಜಕ್ಕಣ್ಣ ಮಾಸ್ತರ ಮೀಸಿ ಉಪನ್ಯಾಸ ನೀಡುವರು.

ಕಾರಣ ತಾಲೂಕಿನ ಸಮಸ್ತ ನಾಗರಿಕರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಶೈಕ್ಷಣಿಕ ಶುಲ್ಕ ಮರುಪಾವತಿ ಯೋಜನೆಯಡಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ರಾಷ್ಟ್ರೀಯ ಸಂಸ್ಥೆಗಳು ಆಯೋಜಿಸುವ ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ಪಡೆದ ಮತ್ತು ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಿಗೆ ಭಾರತ ಸರ್ಕಾರದಿಂದ ನಿಯೋಜಿಸಲ್ಪಟ್ಟ ತಂಡದಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕವನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಅರ್ಹ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಕ್ರೀಡಾಪಟುಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಜಿ ನಮೂನೆಯನ್ನು ಪಡೆದು, ದಿನಾಂಕ : 18-09-2024ರೊಳಗಾಗಿ ಭರ್ತಿ ಮಾಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಗೆ ಸಲ್ಲಿಸಬೇಕು.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ: 08352-251085,ಮೊ: 9480886555 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಏಕಲವ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಯುವ ಸಬಲಿಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆ ತೋರಿದ ಕ್ರೀಡಾಪಟುಗಳಿಂದ ಏಕಲವ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಿದೆ.

ನಿಗದಿತ ಅರ್ಜಿ ನಮೂನೆಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವಿಜಯಪುರ ಕಚೇರಿಯಿಂದ ಪಡೆದು, ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ದಿನಾಂಕ : 18-09-2024ರೊಳಗೆ ಸಲ್ಲಿಸಬೇಕು.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ: 08352-251085,ಮೊ: 9480886555 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಸೋಮಲಿಂಗ ಮಹಾರಾಜರಿಗೆ ಸನ್ಮಾನ



**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಬಂಜಾರಾ ಸಮುದಾಯದ ಪ್ರಮುಖರು ಕೆಸರಟ್ಟಿ ಶಂಕರಲಿಂಗಮಠದ ಸೋಮಲಿಂಗ ಮಹಾರಾಜ್‌ರ 41ನೇ ಜನ್ಮದಿನದ ಪ್ರಯುಕ್ತ ಅವರನ್ನು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಸುಭಾಸ ಜಾಧವ, ಬಾಳು ರಾಠೋಡ, ವಿಕ್ರಮ ರಾಠೋಡ, ವಸಂತ ರಾಠೋಡ, ಉಪೇಂದ್ರ ಚವ್ಹಾಣ, ಧರ್ಮು ರಾಠೋಡ, ಅಶೋಕ ರಾಠೋಡ ಇದ್ದರು.

# ಪ್ರೊ.ರವಿ ಗೋಲಾಗೆ ಡಾಕ್ಟರೇಟ್ ಪದವಿ ಗೌರವ

**ಉದಯರಶ್ಮಿ ನ್ಯೂಸ್**



ಸಿಂದಗಿ: ಪಟ್ಟಣದ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಜಿ.ಪಿ.ಪೋರವಾಲ ಕಲಾ, ವಾಣಿಜ್ಯ ಮತ್ತು ವ್ಹಿ.ವ್ಹಿ.ಸಾಲಿಮಠ ವಿಜ್ಞಾನ ಪದವಿ ಮಹಾವಿದ್ಯಾಲಯದ ದೈಹಿಕ ನಿರ್ದೇಶಕ ಮತ್ತು ರಾಜ್ಯ, ರಾಷ್ಟ ಮಟ್ಟದಲ್ಲಿ ವಿವಿಧ ಕ್ರೀಡೆಗಳ ವಿಕ್ಷಕ ವಿವರಣೆಗಾರ ಪ್ರೊ.ರವಿ ಗೋಲಾ ಅವರಿಗೆ ಆಂದ್ರ ಪ್ರದೇಶದ ದ್ರಾವಿಡಿಯನ್ ವಿಶ್ವವಿದ್ಯಾನಿಲಯ ಕುಪ್ಪಂದಲ್ಲಿ ಅವರು ಮಂಡಿಸಿದ ಕ್ರಿಕೆಟ್ ಕ್ರೀಡೆಗೆ ಸಂಬಂಧಿಸಿದ ದಿ.ಇಂಪೆಕ್ಟ್ ಆಫ್ ಸೆಲ್ಫ್ ಎಸ್ಟಿಂ ಸಬ್ಜೆಕ್ಟಿವ ವೆಲ್ ಬೀಯಿಂಗ್ ಆಂಡ್ಯ ಸಪೋರ್ಟಿವ್ ಸ್ಕೇಟರ್ಸ ಬಿಹೇವಿಯರ್ ಆಲ್ ದ ಪರ್ಫಾರ್ಮೆನ್ಸ್ ಆಫ್ ಕ್ರೀಕೇಟರ್ಸ ವಿಷಯದ ಮೇಲೆ ಮಂಡಿಸಿದ ಪ್ರಬಂಧಕ್ಕೆ ಡಾಕ್ಟರೇಟ್ ಪದವಿ ನೀಡಿದೆ.

ಅವರಿಗೆ ವಿಜಯಪುರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರೋ. ಹಣುಮಂತಯ್ಯ ಪೂಜಾರಿ ಅವರು ಮಾರ್ಗದರ್ಶನ ನೀಡಿದ್ದಾರೆ.

ಅವರ ಈ ಡಾಕ್ಟರೇಟ್ ಸಾಧನೆಗೆ ಸಂಸ್ಥೆಯ ಚೆರಮನ್ನರಾದ ಗುರುಕುಲ ಭಾಸ್ಕರ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು, ಶಾಸಕ ಅಶೋಕ ಮನಗೂಳಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ಇಂದುಶೇಖರ ಮಣೂರ, ತಾಲೂಕಾಧ್ಯಕ್ಷ ಆನಂದ ಶಾಬಾದಿ ಹಾಗೂ ಆಡಳಿತ ಮಂಡಳಿ ನಿರ್ದೇಶಕರು ಮತ್ತು ಪ್ರಾಚಾರ್ಯ ಪ್ರೋ.ಡಿ.ಎಮ್.ಪಾಟೀಲ ಸೇ-ರಿದಂತೆ ಕಾಲೇಜಿನ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

### ಡಾ.ಪ್ರಭುಸಾರಂಗದೇವ ಶಿವಾಚಾರ್ಯರ ಜನ್ಮದಿನದ ಪ್ರಯುಕ್ತ ರಕ್ತದಾನ ಶಿಬಿರ

# ಮಾನವ ರಕ್ತದಾನ ಮಾಡಿದರಷ್ಟೇ ರಕ್ತದ ಉತ್ಪಾದನೆ ಸಾಧ್ಯ

**ಉದಯರಶ್ಮಿ ನ್ಯೂಸ್**



ಸಿಂದಗಿ: ರಕ್ತವನ್ನು ಉತ್ಪಾದಿಸಲು ಸಾಧ್ಯವಿಲ್ಲ. ಮಾನವ ದಾನ ಮಾಡಿದರಷ್ಟೆ ರಕ್ತದ ಉತ್ಪಾದನೆ ಸಾಧ್ಯ ಎಂದು ಜಮಖಂಡಿಯ ಕೊಣ್ಣೂರಿನ ಹೊರಗಿನ ಮಠದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಹೇಳಿದರು.

ಪಟ್ಟಣದ ಸಾರಂಗಮಠದಲ್ಲಿ ಪೂಜ್ಯ ಶ್ರೀ ಚೆನ್ನವೀರ ಸ್ವಾಮೀಜಿ ಪ್ರತಿಷ್ಠಾನ, ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆ ಸಾರಂಗಮಠದ ಆಶ್ರಯದಲ್ಲಿ ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರ ಜನ್ಮದಿನದ ಪ್ರಯುಕ್ತ ಆರ್.ಡಿ.ಪಾಟೀಲ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪಪೂ ಕಾಲೇಜ, ಜಿ.ಪಿ.ಪೋರವಾಲ್ ಕಲಾ, ವಾಣಿಜ್ಯ ಹಾಗೂ ವ್ಹಿ.ವ್ಹಿ.ಸಾಲಿಮಠ ವಿಜ್ಞಾನ ಪದವಿ ಕಾಲೇಜ ಶ್ರೀಪದ್ಮರಾಜ ಮಹಿಳಾ ಪಪೂ ಹಾಗೂ ಪದವಿ ಕಾಲೇಜ, ಶ್ರೀಪದ್ಮರಾಜ ಶಿಕ್ಷಣ ಮಹಾವಿದ್ಯಾಲಯದ ಸಹಯೋಗದಲ್ಲಿ ವಿಜಯಪುರದ ಶ್ರೀ ಬಿ.ಎಂಪಾಟೀಲ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರ ಹಮ್ಮಿಕೊಂಡ ಸ್ವಯಂ ಪ್ರೇರಿತ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ದಾನಗಳಲ್ಲಿ ರಕ್ತದಾನ ಮಹಾದಾನ. ಆನರ ಜೀವ ರಕ್ಷಣೆಗೆ ರಕ್ತ ಅತ್ಯಗತ್ಯವಾಗಿದ್ದು, ರಕ್ತದ ಅವಶ್ಯಕತೆಯಿರುವ ವ್ಯಕ್ತಿಗಳಿಗೆ ರಕ್ತದಾನ ಮಾಡುವುದರ ಮುಖಾಂತರ ಎಲ್ಲರೂ ಜನರ ಅಮೂಲ್ಯವಾದ ಜೀವ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ಈ ವೇಳೆ ಸ್ವಯಂ ಪ್ರೇ-ರಿತರಾಗಿ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಶಿಬಿರದಲ್ಲಿ 70ಕ್ಕೂ ಅಧಿಕ ಜನರು ರಕ್ತದಾನ ಮಾಡಿದರು. ರಕ್ತದಾನ ಶಿಬಿರ ಮತ್ತು ಸಸಿ ನಡುವ ಮೂಲಕ ಪೂಜ್ಯರು ತಮ್ಮ ಜನ್ಮದಿನವನ್ನು ಆಚರಿಸಿಕೊಂಡರು.

ಶಿಬಿರ'ದ'ಲ್ಲಿ ಡಾ.ಪ್ರಭು'ಸಾರಂಗದೇವ ಶಿವಾಚಾರ್ಯರು, ಡಾ.ವಿ-ಜಯಕುಮಾರ ವಾರದ, ಅಶೋಕ ವಾರದ, ಗಂಗಾಧರ ಜೋಗುರ, ಡಾ.ಬಿ.ಜಿ.ಮಠ, ಅಶೋಕ ಮಸಳಿ, ಡಾ.ರವಿ ಗೋಲಾ, ಡಾ.ಶರಣಬಸವ ಜೋಗುರ, ಡಾ.ಮಹಾಂತೇಶ ಹಿರೇಮಠ, ಚಂದ್ರಶೇಖರ ನಾಗೂರ, ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ, ವಿರೇಶ ಜೋಗುರ, ಶಿವಕುಮಾರ ಜೋಗುರ, ಚನ್ನು ಕತ್ತಿ, ಸೇರಿದಂತೆ ಆಡಳಿತ ಮಂಡಳಿ ನಿರ್ದೇಶಕರು, ವಿವಿಧ ಅಂಗ ಸಂಸ್ಥೆಗಳ ಪ್ರಾಚಾರ್ಯರು, ಪ್ರಾಧ್ಯಾಪಕರು, ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ಶ್ರೀಮಠದ ಭಕ್ತರು ಶಿಬಿರದಲ್ಲಿ ಭಾಗವಹಿಸಿದ್ದರು.

# ಸಂದರ್ಭಾನುಸಾರ ಅರಳುವ ಜನಪದ ಸಂಸ್ಕೃತಿ :ಡಾ.ಮಾಗಣಗೇರಿ

**ಉದಯರಶ್ಮಿ ನ್ಯೂಸ್**



ಚಡಚಣ: ಜನಪದ ಸಂಸ್ಕೃತಿ ಅರಳುವುದು ಸಂದರ್ಭಾನುಸಾರ, ತರಬೇತಿಯಿಂದಲ್ಲ. ಒಬ್ಬ ವ್ಯಕ್ತಿ ಶಕ್ತಿವಂತನೊ, ಕಲಾವಿದನೋ, ಜಾಣನೋ, ಜನಸೇವಕನೋ ಎಂದು ಗೊತ್ತಾಗುವುದು ಅವನಿಗೆಂದೆ ನಿರ್ದಿಷ್ಟವಾಗಿರುವ ಸಂದರ್ಭದಲ್ಲಿ ಮಾತ್ರ. ಶಿಷ್ಟ ಸಮಾಜದಂತೆ ಜನಪದ ಸಮಾಜದಲ್ಲಿ ಕಲಾವಿದ, ಪೈಲ್ವಾನ್, ಸಮಾಜ ಸುಧಾರಕ ಎಂದು ಪ್ರತ್ಯೇಕ ಇರುವುದಿಲ್ಲ. ದಿನನಿತ್ಯದ ಅವನ ಕೆಲಸದ ಜೊತೆಯಲ್ಲೇ ಅವನ ವಿಶೇಷವೆಂಬ ನೈಪುಣ್ಯ ಇರುತ್ತದೆ. ಕಲಾವಿದನಂತೆಯೆ ಜನಪದ ವೈದ್ಯರೂ ಕೂಡಾ ಸಂದರ್ಭಾನುಸಾರವಾಗಿ ರೋಗಿಯನ್ನು ಉಪಚ-ರಿಸುತ್ತಿದ್ದರು. ಅವರು ಪ್ರತ್ಯೇಕ ಕಾಣಿಸಿಕೊಳ್ಳುವಿಕೆಯಲ್ಲಿ ಸಿಗುವುದಿಲ್ಲ. ಜನಪದ ದೇವತೆಗಳ ಪೂಜಾ-ರಿಗಳನ್ನು ಗಮನಿಸಿ. ಅವರು ಶಿಷ್ಟ ದೇವತೆಗಳ ಪೂಜಾರಿ ಅಥವಾ ಪುರೋಹಿತರ ಥರ ಕಾಣಿಸುವುದಿಲ್ಲ. ಇಂಥವರು ಸಮಾಜದ ಹೊರಗೆ ಇಲ್ಲ, ಹೊರೆಯೂ ಅಲ್ಲ ಎಂದು ಶ್ರೀ ಸಂಗಮೇಶ್ವರ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಎಂ. ಎಸ್. ಮಾಗಣಗೇರಿ ಅಭಿಪ್ರಾಯಪಟ್ಟರು.

ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಾನಪದ ಸಂಸ್ಕೃತಿಯ ಪ್ರಮುಖ ಅಂಶವೆಂದರೆ ಮಾತನಾಡುವ ಪದ ಅಥವಾ ಭಾಷೆ, ಸಮಾಜದೊಳಗಿನ ಪ್ರಮುಖ ಪರಿಕಲ್ಪನೆಗಳನ್ನು ಸಂವಹನ ಮಾಡುವ ಸಾಧನವಾಗಿ, ಮಾನವ ಸ್ಥಿತಿಯ ಪ್ರಮುಖ ಧಾರ್ಮಿಕ ಮತ್ತು ತಾತ್ವಿಕ ಪ್ರತಿಬಿಂಬಗಳು. ಸಾಂಕೇತಿ-ಕ ಭಾಷೆಯ ರೂಪದ ಮೂಲಕ ಸಾಮಾನ್ಯವಾಗಿ ಸಂಬಂಧಿಸಿರುವ ಸಾಮಾಜಿಕ ಅರಿವು ಮತ್ತು ಅವರ ಅನನ್ಯತೆಯ ವ್ಯಕ್ತಿಗಳ ತಿಳುವಳಿಕೆಯು ಹಂಚಿಕೆಯ ಗುಣಲಕ್ಷಣವಾಗಿದೆ ಹಾಗೂ ಸಾಂಕೇತಿಕ ಭಾಷೆಯು ಜಾನಪದ ಸಂಸ್ಕೃತಿಯ ಕೇಂದ್ರ ಲಕ್ಷಣವಾಗಿದೆ ಎಂದು ಹೇಳಿದರು.

ಪ್ರಾಸ್ಥಾವಿಕವಾಗಿ ಮಾತನಾಡಿದ ಪ್ರಾಧ್ಯಾಪಕ ಎಂ.ಎ.ಜನವಾಡ, ಆಗಸ್ಟ್ 22 ಜಗತ್ತಿನ ಜನಪದ ಸಮುದಾಯಗಳಿಗೂ, ವಿದ್ವಾಂಸ-ರಿಗೂ ಒಂದು ಅವಿಸ್ಮರಣೀಯ ದಿನ. ಕಾರಣ, ವಿಲಿಯಂ ಜಾನ್ ಥಾಮ್ಸ್ ಎಂಬ ಬ್ರಿಟಿಷ್ ಪ್ರಾಚೀನ ಅನ್ವೇಷಕ ಅಂಬ್ರೋಸ್ ಮೆರ್ಥಾನ್ ಎನ್ನುವ ಗುಪ್ತನಾಮದಲ್ಲಿ 1846ರ ಆಗಸ್ಟ್ 12ರಂದು 'ದಿ ಅಥೇ ನಿಯಂ' ಎನ್ನುವ ಪತ್ರಿಕೆಗೆ ಒಂದು ಪತ್ರ ಬರೆಯುತ್ತಾನೆ. ಈ ಪತ್ರ ಅದೇ ತಿಂಗಳ 22ರಂದು ಪ್ರಕಟವಾಗುತ್ತದೆ. ಪತ್ರದಲ್ಲಿ 'ದಾಸ್ ವೋಕ್' ಮತ್ತು 'ಜನಪ್ರಿಯ ಪಳೆಯುಳಿಕೆ' ಎಂದು ಕರೆಯುತ್ತಿದ್ದ ಜನರ ಪರಂಪರೆಯ ಸಂಗತಿಗಳ ಅಧ್ಯಯನಕ್ಕೆ 'ಫೋಕ್‌ಲೋರ್' ಎಂದು ಕರೆಯಬಹುದೆಂದು ಸೂಚಿಸಿದ. 'ಫೋಕ್' ಎಂದರೆ ಜನ, 'ಲೋರ್' ಎಂದರೆ ಆ ಜನರ ಜ್ಞಾನ ಅಥವಾ ತಿಳಿವಳಿಕೆ ಎಂದು ವಿವರಿಸುತ್ತಾನೆ. ಆಗ ಮೊದಲ ಬಾರಿಗೆ 'ಫೋಕ್‌ಲೋರ್' ಎನ್ನುವ ಪದವು ಮುದ್ರಿತ ರೂಪದಲ್ಲಿ ಅಕಡೆಮಿಕ್ ವಲಯದ ಬಳಕೆಗೆ ಬರುತ್ತದೆ. ಈ ಚಾರಿತ್ರಿಕ ದಿನದ ನೆನಪಿಗಾಗಿ ಆ ದಿನವನ್ನು ವಿಶ್ವ ಜಾನಪದ ದಿನವನ್ನಾಗಿ ಆಚರಿಸುತ್ತಾ ಬರಲಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಎಸ್. ಬಿ. ರಾಠೋಡ ಮಾತನಾಡಿ, ಜಾನಪದ ಎಂದರೆ ಎಲ್ಲೋ ಹೊರಗಿರುವ ಜನಪದ ಕತೆ, ಗೀತೆ, ಕಲಾ ಪ್ರಕಾರಗಳು ಮಾತ್ರವಲ್ಲ, ಕ್ಷಣ ಕ್ಷಣವೂ ಲೋಕವನ್ನು ನೋಡುವ ನೋಟಕ್ರಮವನ್ನು ನಿರ್ದೇಶಿಸುತ್ತಲೇ ಬಹುಸಂಖ್ಯಾತ ಜನರಲ್ಲಿ ಅಡಗಿ ಕೂತ ಪರಂಪರೆಯ ಬೇರುಗಳ ಮೊತ್ತ ಎಂದು ಕರೆಯಬಹುದು. ಹಾಗಾಗಿ ಸಾಂಕೇತಿಕವಾಗಿ ಜಾನಪದಕ್ಕೆ ಒಂದು ದಿನ ಇರಬಹುದು. ಆದರೆ ಜಾನಪದದ ಬೇರುಗಳು ಕ್ಷಣಕ್ಷಣವೂ ಬಹುಜನರಲ್ಲಿ ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿರುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರೊ. ಮುರುಗೇಶ್ ಕೆ. ಎಂ., ಪ್ರೊ. ಎಸ್. ಬಿ. ಶಿರೋಳ, ಪ್ರೊ. ರಾಮಣ್ಣ ನಡಗೇರಿ, ಪ್ರೊ. ಶಂಕರ, ಪ್ರೊ. ಬಿ.ಎಚ್. ಪವಾರ ಪ್ರೊ. ಪೂಜಾ ಬುರುಡ, ಪ್ರೊ. ದೈವಾಡಿ ಹಾಗೂ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕುಮಾರ ಸಾಗರ ರಾಜನ್ನವರ ಸ್ವಾಗತಿಸಿದರು. ಕುಮಾರ ಚನಬಸ್ಸು ಘರಿಟ ನಿರೂಪಿಸಿ, ವಂದಿಸಿದರು.

# ಖಾಸಗಿ ನಿವೇಶನಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಲು ಸೂಚನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ನಗರ ವ್ಯಾಪ್ತಿಯಲ್ಲಿನ ವಾರ್ಡ ಸಂ.1 ರಿಂದ 35 ರವರೆಗಿನ ಖಾಸಗಿ ಮಾಲೀಕತ್ವದ ಖಾಲಿ ನಿವೇಶನಗಳ ಮಾಲೀಕರು-ಸಾರ್ವಜನಿಕರು ತಮ್ಮ ಖಾಲಿ ನಿವೇಶನಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವಂತೆ ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಖಾಲಿ ನಿವೇಶನಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಮಾಲೀಕರ ಜವಾಬ್ದಾರಿಯಾಗಿರುತ್ತದೆ. ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976ರ ಕಲಂ 256, 257, 332, 333, 334 ಮತ್ತು 335ರಡಿಯಲ್ಲಿ ಖಾಲಿ ನಿವೇಶನಗಳಲ್ಲಿ ಕಸದ ರಾಶಿ, ಕಟ್ಟಡ ಭಗ್ನಾವಶೇಷಗಳನ್ನು ಸುರಿಯುವುದ-ರಿಂದ ನಿವೇಶನಗಳಲ್ಲಿ ಕಸ ಗಿಡಕಂಟಿ ಬೆಳೆದು ಸಾರ್ವಜನಿಕರ ಆರೋಗ್ಯಕ್ಕೆ ಹಾನಿಯಾಗುತ್ತದೆ ಹಾಗೂ ಸ್ವಚ್ಛ ಪರಿಸರಕ್ಕೆ ಧಕ್ಕೆ ಉಂಟಾಗುತ್ತದೆ. ಈ ಕುರಿತು ಪಾಲಿಕೆಯಿಂದ ಹಲವು ಬಾರಿ ನಿವೇಶನ ಮಾಲೀಕರಿಗೆ ಸೂಚನೆ ನೀಡಲಾಗಿದ್ದರೂ ಸಹ ಆದೇಶ ಪಾಲನೆ ಮಾಡದೇ, ಶುಚಿತ್ವ ಕಾಪಾಡಿಕೊಳ್ಳದಿರುವ ಕುರಿತು ಸಾಕಷ್ಟು ದೂರುಗಳು ಪಾಲಿಕೆಗೆ ಸಲ್ಲಿಕೆಯಾಗಿವೆ ಎಂದು ಅವರು ತಿಳಿಸಿದ್ದಾರೆ.

ಪಾಲಿಕೆ ವತಿಯಿಂದ ವಾರ್ಡವಾರು ಮುಖ್ಯ ರಸ್ತೆಗಳ ಸ್ವಚ್ಛತೆ, ವೃತ್ತಗಳ ಸ್ವಚ್ಛತೆ, ಹಾಗೂ ವಾರ್ಡಗಳಲ್ಲಿನ ಕಸದ ರಾಶಿಗಳನ್ನು ಸ್ವಚ್ಛಗೊಳಿಸುವ ಕಾರ್ಯಗಳನ್ನು ಕೈಗೊಳ್ಳಲಾಗುವುದು. ನಗರದ ಸಾರ್ವಜನಿಕರು ವರ್ತಕರು, ರಸ್ತೆ ಬದಿಗಳಲ್ಲಿ ತಮಗೆ ಸಂಬಂಧಿಸಿದ ವಸ್ತುಗಳನ್ನು ತೆರವುಗೊಳಿಸಬೇಕು ಹಾಗೂ ಸುತ್ತಮುತ್ತಲಿನ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ತಪ್ಪಿದಲ್ಲಿ ಸದರಿ ವಸ್ತುಗಳನ್ನು ಅನಾವಶ್ಯಕ ವಸ್ತು ಎಂದು ಪರಿಗಣಿಸಿ ಪಾಲಿಕೆ ವಶಕ್ಕೆ ಪಡೆದುಕೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾಭ್ಯಾಸ ಸಾಲಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅರಿವು (ರಿನ್ಯೂವಲ್) ಸಾಲ ಯೋಜನೆಯಡಿ ವಿದ್ಯಾಭ್ಯಾಸ ಸಾಲಕ್ಕಾಗಿ ಮತೀಯ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಮತೀಯ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿಇಟಿ, ಡಿಸಿಇಟಿ, ಪಿಜಿಸಿಇಟಿ, ನೀಟ್ ಮೂಲಕ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಾದ ವೈದ್ಯಕೀಯ, ದಂತ ವೈದ್ಯಕೀಯ, ಇಂಜಿನೀಯರಿಂಗ್ & ಟೆಕ್ನಾಲಜಿ, ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್, ಅಗ್ರಿಕಲ್ಚರ್ ಇಂಜಿನೀಯರಿಂಗ್ ಸೇರಿದಂತೆ ವಿವಿಧ ಕೋರ್ಸ್‌ಗಳಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಅರಿವು (ರಿನ್ಯೂವಲ್) ಸಾಲ ಯೋಜನೆಯಡಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವಾಗ ನಿಗಮದಿಂದ ಈ ಹಿಂದಿನ ವರ್ಷದಲ್ಲಿ ಪಡೆದಿರುವ ಸಾಲದ ಮೊತ್ತದ ಶೇ.12% ರಷ್ಟು ಪಾವತಿಸಬೇಕಾಗಿರುತ್ತದೆ. ಶೆ.12% ರಷ್ಟು ಮೊತ್ತವನ್ನು ಆನ್‌ಲೈನ್ ಮೂಲಕ ಪಾವತಿಸಬೇಕು.

ಈ ಹಿಂದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿ, ಬೇರೆ ಬೇರೆ ವರ್ಷಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರಿವು ವಿದ್ಯಾಭ್ಯಾಸ ಸಾಲ ಪಡೆಯದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಸಹ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ದಿನಾಂಕ : 31-10-2024 ಕೊನೆಯ ದಿನವಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲಾನಾ ಆಝಾದ ಭವನ, ಜಿಲ್ಲಾ ಪಂಚಾಯತ್ ರಸ್ತೆ, ಕನಕದಾಸ ಬಡಾವಣೆ, ವಿಜಯಪುರ ದೂ: 08352-278344 & ಮೊ: 8277944209 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ದೇಣಿಗೆಯಾಗಿ ಸ್ಮಾರ್ಟಬೋರ್ಡ್ ದೇಣಿಗೆ ಶ್ಲಾಘನೀಯ :ಸಿಂದಗಿ

**ಉದಯರಶ್ಮಿ ನ್ಯೂಸ್**




ತಿಕೋಟಾ: ತಾಲೂಕು ವ್ಯಾಪ್ತಿಯ ಬಾಬಾನಗರ ಗ್ರಾಮದ ಸರಕಾರಿ ಗಂಡು ಮಕ್ಕಳ ಮಾದರಿ ಪ್ರಾಥ-ಮಿಕ ಶಾಲೆಯಲ್ಲಿ ಶೇಠ ತಾಪಿದಾಸ ತುಳಸಿದಾಸ ವಜ್ರದಾಸ್ ಚಾ-ರಿಟೇಬಲ್ ಟ್ರಸ್ಟ್ ಮುಂಬಯಿ ಇವರು ಕೊಡಮಾಡಿದ ಸ್ಮಾರ್ಟಬೋರ್ಡ್ ಉದ್ಘಾಟನಾ ಸಮಾರಂಭ ಜರುಗಿತು.

ವಿಶ್ವನಾಥ ಸಿಂದಗಿ ಅವರು ಸ್ಮಾರ್ಟಬೋರ್ಡ್ ಉದ್ಘಾಟನೆ ಮಾಡಿ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳು ನಗರ ಪ್ರದೇಶದ ಮಕ್ಕಳ ಹಾಗೇ ಅತ್ಯುತ್ತಮ ಶಿಕ್ಷಣ ಪಡೆಯಲು ಸ್ಮಾರ್ಟಬೋರ್ಡ್ ದೇಣಿಗೆಯಾಗಿ ನೀಡಿರುವುದು ಶ್ಲಾಘನೀಯ ಕಾರ್ಯ. ಇದರ ಸದುಪಯೋಗವನ್ನು ಸರಿಯಾಗಿ ಪಡೆದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಶಾಲೆಯ ಮುಖ್ಯ ಗುರು ಎಸ್.ಐ.ಬಾಗಲಕೋಟೆ ಅವರು ಪ್ರಸ್ತಾವಿಕವಾಗಿ ಮಾತನಾಡಿದರು, ಎ.ಎಮ್.ಚಮಕೇರಿ ಶಿಕ್ಷಕರು ಗೌರವ ಸಮರ್ಪಣೆ ನಡೆಸಿಕೊಟ್ಟರು, ಜೆ. ಎನ್.ಬಾಗಲಕೋಟೆ ಅವರು ವಂದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯತಿ ಅಧ್ಯಕ್ಷ ಸಾಹಿರಾಬಾನು ಏಳಾಪುರ ಅವರು ವಹಿಸಿಕೊಂಡಿದ್ದರು.

ವೇದಿಕೆಯ ಮೇಲೆ ಎಸ್.ಐ ರುದ್ರಗೌಡರ, ಎಸ್.ಬಿ.ಬಿರಾದಾರ, ಬಿ.ಎಸ್.ಕುಮಟಗಿ, ಸೇರಿದಂತೆ ಎಸ್.ಡಿ.ಎಂ.ಸಿ & ಗ್ರಾಮ ಪಂಚಾಯತಿ ಸದಸ್ಯರು, ಶಾಲಾ ಶಿಕ್ಷಕರು, ಮಕ್ಕಳು ಹಾಜರಿದ್ದರು.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಉತ್ತರಾದಿ ಮಠದಲ್ಲಿ ಪಲ್ಲಕ್ಕಿ ಉತ್ಸವ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪಟ್ಟಣದ ಉತ್ತರಾದಿ ಮಠದಲ್ಲಿ ಕಲಿಯುಗದ ಕಾಮಧೇನು, ಕಲ್ಪವೃಕ್ಷ ರಾಘವೇಂದ್ರ ಸ್ವಾಮಿಗಳ ಆರಾಧನೆ ಮಹೋತ್ಸವದಂಗವಾಗಿ ಗುರುವಾರ ಉತ್ತರಾರಾಧನೆ ನಿಮಿತ್ತ ಬೆಳಗ್ಗೆ ಸುಪ್ರಭಾತ, ರಾಘವೇಂದ್ರ ಸ್ವಾಮಿಗಳ ಅಷ್ಟೋತ್ತರ, ಮಹಾಪಂಚಾಮೃತ ಅಭಿಷೇಕ, ಬೃಂದಾನವನದ ಅಲಂಕಾರ ಪೂಜೆ, ಸತ್ಯನಾರಾಯಣ ಪೂಜೆ, ತೀರ್ಥ ಪ್ರಸಾದ ಜರುಗಿತು. ಮಧ್ಯಾನ್ನ ಸಂಭ್ರಮದಿಂದ ಪಲ್ಲಕ್ಕಿ ಉತ್ಸವ ಜರುಗಿತು.

ಪೂಜಾ ಕಾರ್ಯಕ್ರಮದಲ್ಲಿ ವಾದಿರಾಜಆಚಾರ್ಯ ಯಜುರ್ವೇದಿ, ರಾಮಾಚಾರ್ ಜೋಶಿ, ವಸಂತಆಚಾರ್ಯ ಇಂಗಳೇಶ್ವರ, ವಸಂತ ಕುಲಕರ್ಣಿ, ಶ್ರೀಧರಆಚಾರ್ಯ ಚಿಮ್ಮಲಗಿ, ಆನಂದಆಚಾರ್ಯ ಚಿಮ್ಮಲಗಿ, ವಿಠ್ಠಲಆಚಾರ್ ಜೋಶಿ, ರಾಮಾಚಾರಿ ಯಜುರ್ವೇದಿ, ಯಲಗೂರೇಶಆಚಾರ್ಯ ಯಜುರ್ವೇದಿ, ಅನಂತ ಕುಲಕರ್ಣಿ, ಅಜಿತ ಉಮರ್ಜಿ, ನಾರಾಯಣ ಕುಲಕರ್ಣಿ ಇತರರು ಇದ್ದರು.

# ಐತಿಹಾಸಿಕ ಮೂಲನಂದಿಶ್ವರ (ಬಸವೇಶ್ವರ) ಜಾತ್ರೆಗೆ ಕ್ಷಣ ಗಣನೆ

**ಉದಯರಶ್ಮಿ ನ್ಯೂಸ್**

– ಬಸವರಾಜ ನಂದಿಹಾಳ



ಬಸವನಬಾಗೇವಾಡಿ: ಪಟ್ಟಣದ ಆರಾಧ್ಯದೈವ ಮೂಲನಂದೀಶ್ವರ (ಬಸವೇಶ್ವರ)ದೇವರ ಐತಿಹಾಸಿಕ ಜಾತ್ರಾಮಹೋತ್ಸವ ಆ.26 ರಿಂದ 30 ರವರೆಗೆ ಐದು ದಿನಗಳ ಕಾಲ ನಡೆಯುವ ಹಿನ್ನೆಲೆಯಲ್ಲಿ ಬಸವೇಶ್ವರ ದೇವಾಲಯದ ಅಂತರಾಷ್ಟೀಯ ಶಾಲೆಯ ಪಕ್ಕದಲ್ಲಿರುವ ಸ್ಥಳೀಯ ಗಣ್ಯ ವ್ಯಾಪಾರಸ್ಥ ಅನಿಲ(ಭರತು) ಅಗರವಾಲ ಅವರ ಜಮೀನಿನಲ್ಲಿ ವಿವಿಧೆಡೆಗಳಿಂದ ಆಗಮಿಸಿದ್ದ ವಿವಿಧ ಮಳಿಗೆಗಳ ವ್ಯಾಪಾರಸ್ಥರು ಗುರುವಾರ ತಮ್ಮ ತಮ್ಮ ಮಳಿಗೆಗಳನ್ನು ಹಾಕಲು ಭರದಿಂದ ಸಿದ್ಧತೆ ಕೈಗೊಂಡಿದ್ದು ಕಂಡುಬಂದಿತ್ತು.

ಈ ಜಾಗೆಯಲ್ಲಿ ಮಳಿಗೆಗಳಿಗೆ ಜನರು ಬರಲು ವಿವಿಧೆಡೆ ರಸ್ತೆ ವ್ಯವಸ್ಥೆ ಮಾಡಲಾಗಿದೆ. ಜಮೀನಿನಲ್ಲಿ ಗರಸು ಹಾಕಿ ರಸ್ತೆ ಮಾಡಲಾಗಿದೆ. ಇದರಿಂದಾಗಿ ಮಳೆ ಬಂದರೂ ರಾಡಿಯಾಗುವ ಪ್ರಮೇಯ ಇರುವುದಿಲ್ಲ. ಸುವ್ಯವಸ್ಥಿತ ಮಳಿಗೆಗಳನ್ನು ಹಾಕಲು ವ್ಯವಸ್ಥೆ ಮಾಡಲಾಗಿದೆ.

ಬಸವೇಶ್ವರ ಜಾತ್ರಾ ಉತ್ಸವ ಸಮಿತಿ, ಬಸವೇಶ್ವರ ಸೇವಾ ಉತ್ಸವ ಸಮಿತಿ ಪದಾಧಿಕಾರಿಗಳು ಜಾತ್ರೆಗೆ ಹಾಕಲಾಗುವ ತಾತ್ಕಲಿಕ ಮಳಿಗೆಗಳಿಗೆ ಭರತು ಅಗರವಾಲ ಜಮೀನಿನಲ್ಲಿ ಮಳಿಗೆ ಹಾಕುವವರಿಗೆ ಹಂಚಿಕೆ ಮಾಡಿದ್ದರಿಂದಾಗಿ ತಮ್ಮ ತಮ್ಮ ಮಳಿಗೆಗಳನ್ನು ಹಾಕುವ ಸಿದ್ಧತೆ ಕೈಗೊಂಡಿದ್ದಾರೆ. ಮಧ್ಯಾನ್ಹ, ಸಂಜೆ ಬಂದ ಮಳೆಯು ಮಳಿಗೆ ಹಾಕಲು ಅವಕಾಶ ನೀಡಲಿಲ್ಲ. ಮಳೆ ವಿರಾಮ ನೀಡಿದ ನಂತರ ಮಳಿಗೆ ಹಾಕುವ ಕಾರ್ಯದಲ್ಲಿ ತೊಡಗಿಕೊಂಡರು.

ಪ್ರತಿ ವರ್ಷ ಬಸವೇಶ್ವರ ಜಾತ್ರೆಯ ಸಂದರ್ಭದಲ್ಲಿ ರಸ್ತೆಯ ಪಕ್ಕದಲ್ಲಿ ಜಾತ್ರೆಯ ಮಳಿಗೆಗಳನ್ನು ಹಾಕಲಾಗುತ್ತಿತ್ತು. ಇದರಿಂದಾಗಿ ಸಂಚಾರಕ್ಕೆ ತೀವ್ರ ತೊಂದರೆಯುಂಟಾಗುತ್ತಿತ್ತು. 2023 ರಲ್ಲಿ ಗಂಗಾಧರ ಕುಂಟೋಜಿ ಅವರು ಹಳ್ಳದ ಪಕ್ಕದಲ್ಲಿರುವ ತಮ್ಮ ಜಾಗೆಯಲ್ಲಿ ಜಾತ್ರೆಯ ಮಳಿಗೆಗಳನ್ನು ಹಾಕಲು ಉಚಿತವಾಗಿ ಅವಕಾಶ ನೀಡಿದ್ದರು. ಆಗ ರಸ್ತೆ ಸಂಚಾರಕ್ಕೆ ಅಷ್ಟಾಗಿ ತೊಂದರೆಯಾಗಿರಲಿಲ್ಲ. ಈ ಸಲ ಅನಿಲ ಅಗರವಾಲ ಅವರು ದೇವಾಲಯದ ಪಕ್ಕದಲ್ಲಿಯೇ ತಮ್ಮ ಜಾಗೆ ನೀಡಿದ್ದರಿಂದ ಈ ಸಲವೂ ಸಂಚಾರಕ್ಕೆ ಅಷ್ಟಾಗಿ ತೊಂದರೆಯಾಗುವುದಿಲ್ಲ. ಜಾತ್ರೆಯ ಮಳಿಗೆಗಳನ್ನು ಹಾಕಲು ಅನಿಲ ಅಗರವಾಲ ಅವರು ಉಚಿತವಾಗಿ ಜಾಗೆಯನ್ನು ನೀಡಿದ್ದು ಜಾತ್ರಾ ಉತ್ಸವ ಸಮಿತಿ, ಬಸವೇಶ್ವರ ಸೇವಾ ಸಮಿತಿಗೆ ಸಂತಸ ತಂದಿದೆ.

ಜಾತ್ರೆಯಂಗವಾಗಿ ವಿವಿಧ ತೂಗು ತೊಟ್ಟಿಲು ಸೇರಿದಂತೆ ವಿವಿಧ ಮನರಂಜನಾ ಸಾಮಗ್ರಿಗಳನ್ನು ಹಾಕುವ ಕಾರ್ಯ ಭರದಿಂದ ನಡೆದಿದೆ. ಜಾತ್ರೆಯಂಗವಾಗಿ ಬಳೆ ಅಂಗಡಿ, ಸ್ಟೇಶನರಿ ಅಂಗಡಿ, ಗೊಂಬೆ ಅಂಗಡಿ, ಬಟ್ಟೆ ಅಂಗಡಿ, ಚಪ್ಪಲಿ ಅಂಗಡಿ, ಮಿಠಾಯಿ ಅಂಗಡಿ, ವಿವಿಧ ತಿನಿಸುಗಳ ಅಂಗಡಿ, ಕಬ್ಬಿನಹಾಲು ಅಂಗಡಿ ಸೇ-ರಿದಂತೆ ವಿವಿಧ ಅಂಗಡಿಗಳನ್ನು ಹಾಕಲು ಸಂಬಂಧಿಸಿದ ಮಳಿಗೆಯ ವ್ಯಾಪಾರಸ್ಥರು ಅಗತ್ಯ ಸಿದ್ಧತೆ ಭರದಿಂದ ಮಾಡಿಕೊಳ್ಳುತ್ತಿದ್ದಾರೆ. ಮಳಿಗೆಗಳನ್ನು ಹಾಕಲು ಸ್ಥಳೀಯ ವ್ಯಾಪಾರಸ್ಥರು ಸೇರಿದಂತೆ ಜಿಲ್ಲೆ, ವಿವಿಧ ಜಿಲ್ಲೆ, ಆಂದ್ರಪ್ರದೇಶ, ಬಾಂಬೆ, ಉತ್ತರಪ್ರದೇಶ, ದೆಹಲಿ ಸೇರಿದಂತೆ ವಿವಿಧೆಡೆ ವ್ಯಾಪಾರಸ್ಥರು ಬಂದಿದ್ದಾರೆ.

ಕಳೆದ ಹತ್ತು ವರ್ಷದಿಂದ ಈ ಜಾತ್ರೆಯಲ್ಲಿ ಗೊಂಬೆ ಅಂಗಡಿ ಹಾಕಲಾಗುತ್ತಿದೆ.ಪ್ರತಿ ವರ್ಷ ವಿವಿಧೆಡೆ ಅಂಗಡಿಯನ್ನು ಹಾಕಲು ಇಲ್ಲಿನ ಸಮಿತಿ ನೀಡುತ್ತಿದೆ. ಈ ಸಲ ಉತ್ತಮವಾದ ಜಾಗೆಯಲ್ಲಿ ನೀಡಲಾಗಿದೆ. ಪ್ರತಿವರ್ಷ ಇದೇ ಜಾಗೆಯಲ್ಲಿ ನೀಡಿದರೆ ಉತ್ತಮ ಎಂದು ಗೊಂಬೆ ಅಂಗಡಿಯನ್ನು ಹಾಕಲು ಸಿದ್ಧತೆ ಮಾಡಿಕೊಳ್ಳುತ್ತಿದ್ದ ಉತ್ತರಪ್ರದೇಶದ ವ್ಯಾಪಾರಿ ಜಮೀಲ ಬಾಯಿ ಅವರು ಹೇಳಿದರು.

ನಾವು ನಮ್ಮ ತಂದೆ ದಾವಲಸಾಬ ಅವರ ಕಾಲದಿಂದಲೂ ಜಾತ್ರೆಯಲ್ಲಿ ಬಳೆ ವ್ಯಾಪಾರ ಮಾಡುತ್ತಾ ಬಂದಿದ್ದೇವೆ. ಕಳೆದ 30 ವರ್ಷದಿಂದಲೂ ನಮ್ಮ ಮನೆತನ ಈ ಜಾತ್ರೆಯಲ್ಲಿ ಬಳೆ ವ್ಯಾಪಾರ ಮಾಡಿಕೊಂಡು ಬಂದಿದೆ. ಈ ಸಲ ಆಯಾ ವ್ಯಾಪಾರಕ್ಕೆ ಅನುಗುಣವಾಗಿ ಆಯಾ ಮಳಿಗೆ ವ್ಯಾಪಾರಿಗಳಿಗೆ ಜಾತ್ರಾ ಸಮಿತಿಯವರು ಜಾಗೆಯನ್ನು ನೀಡಿದ್ದಾರೆ. ಬೇರೆ ಜಾತ್ರೆಯಲ್ಲಿ ಮಳಿಗೆಗಳನ್ನು ಹಾಕಲು ಇಂತಿಷ್ಟು ಎಂದು ಹಣ ನಿಗದಿ ಮಾಡುತ್ತಾರೆ. ಆದರೆ ಈ ಜಾತ್ರೆಯಲ್ಲಿ ಹಣ ನಿಗದಿ ಮಾಡುವುದಿಲ್ಲ. ಜಾತ್ರೆಗೆ ದೇಣಿಗೆ ಮಾತ್ರ ಪಡೆದುಕೊಳ್ಳುತ್ತಾರೆ. ಈ ಸಲ ಬಹಳ ಅಂಗಡಿಗಳು ಜಾತ್ರೆಗೆ ಬಂದಿವೆ. ವ್ಯಾಪಾರ ಯಾವ ರೀತಿಯಾಗುತ್ತದೆ ಎಂದು ಕಾಯ್ದು ನೋಡಬೇಕು. ಮಳೆ ವಿರಾಮ ನೀಡಿದರೆ ವ್ಯಾಪಾರ ಉತ್ತಮವಾಗಬಹುದು ಎಂದು ಬಳೆ ಅಂಗಡಿ ಹಾಕಲು ಸಿದ್ಧತೆ ಮಾಡಿಕೊಳ್ಳುತ್ತಿದ್ದ ಇಸ್ಮಾಯಿಲ್ ತಾಂಬೋಳಿ ಹೇಳಿದರು.

# ರಾಯರ ಆರಾಧನಾ ಮಹೋತ್ಸವ: ಸಂಭ್ರಮದ ರಥೋತ್ಸವ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ಪಟ್ಟಣದ ಗೌರಿ–ಶಂಕರ ಗುಡಿ ಹತ್ತಿರವಿರುವ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮೂರು ದಿನಗಳ ಕಾಲ ರಾಘವೇಂದ್ರ ಸ್ವಾಮಿಗಳ 353 ನೇ ರಾಯರ ಆರಾಧನಾ ಮಹೋತ್ಸವ ಸಂಭ್ರಮದಿಂದ ಜರುಗಿತು.

ಮೊದಲ ದಿನ ಪೂರ್ವಾ ಆರಾಧನೆ, ಎರಡನೇ ದಿನ ಮಧ್ಯಾ ಆರಾಧನೆ, ಕೊನೆ ದಿನವಾದ ಗುರುವಾರ ಉತ್ತಾರಾರಾಧನೆಯಂಗವಾಗಿ ಬೆಳಗ್ಗೆ ಅಷ್ಟೋತ್ತರ, ರಾಯರ ಬೃಂದಾವನ ಅಲಂಕಾರ ಪೂಜೆ, ಸತ್ಯನಾರಾಯಣ ಪೂಜೆ, ಮಧ್ಯಾನ್ಹ ರಥೋತ್ಸವ, ಮಹಾಪ್ರಸಾದ, ಸಂಜೆ ಪಲ್ಲಕ್ಕಿ ಉತ್ಸವ, ಪ್ರವಚನ ಭಜನೆ ಭಕ್ತಿಪೂರ್ವಕ ಸಡಗರ, ಸಂಭ್ರಮದಿಂದ ಜರುಗಿತು.

ರಾಯರ ರಥೋತ್ಸವದಲ್ಲಿ ಭಜನಾ ಪದಗಳನ್ನು ಭಕ್ತರು ಸುಶ್ರಾವ್ಯವಾಗಿ ಹಾಡಿದರು. ಭಜನಾ ಪದಗಳಿಗೆ ನೃತ್ಯ ಸೇವೆ ಮಾಡುವ ಮೂಲಕ ರಾಯರಿಗೆ ಭಕ್ತಿ ಸಮರ್ಪಿಸಿದರು.

ರಥೋತ್ಸವದಲ್ಲಿ ರಾಯರ ಮಠದ ಅಧ್ಯಕ್ಷ ಅನಿಲ ಹಣಮಂತರಾಯ ಕುಲಕರ್ಣಿ, ಮಧುಕರ ಚೌಧರಿ, ಮುಕುಂದ ದೇಶಪಾಂಡೆ, ಅನಿಲ ದೇಶಪಾಂಡೆ, ವಿಠ್ಠಲ ಕುಲಕರ್ಣಿ, ಶಿರಿಷ್ ಇಂಗಳೇಶ್ವರ, ಬಂಡಾಚಾರ್ಯ ಇಂಗಳೇಶ್ವರ, ವಿಠ್ಠಲ ದೇಶಪಾಂಡೆ, ರಮೇಶ ಇನಾಮದಾರ,ವಿನಾಯಕ ದೇಶಪಾಂಡೆ, ಸಂಜೀವ ದೇಶಪಾಂಡೆ, ಸಂಜೀವ ಕುಲಕರ್ಣಿ, ರವಿಚಂದ್ರ ಜೋಶಿ, ಭಾರತಿ ಕುಲಕರ್ಣಿ, ಪುಷ್ಪಾ ಕುಲಕರ್ಣಿ, ನಾಗವೇಣಿ ಇನಾಮದಾರ, ವಿದ್ಯಾ ಕುಲಕರ್ಣಿ, ಅನಿತಾ ದೇಶಪಾಂಡೆ, ಸುಜಾತಾ ಜೋಶಿ, ಕಾವೇರಿ ಜೋಶಿ, ವಿಜಯಲಕ್ಷ್ಮೀ ಜೋಶಿ, ಅಂಜನಾ ಕುಲಕರ್ಣಿ, ರಜನಿ ಅಥಣಿ, ಮಾಧವಿ ಚೌಧರಿ, ಸುಧಾ ಚೌಧರಿ, ಸುರೇಖಾ ಕುಲಕರ್ಣಿ, ವೈಷ್ಣವಿ ಕುಲಕರ್ಣಿ, ಅನಿತಾ ಕುಲಕರ್ಣಿ, ನಂದಾ ಇಂಗಳೇಶ್ವರ, ನಂದಾ ಬೇಲೇರಿ, ವೈಷ್ಣವಿ ಕಿರಣ ಕುಲಕರ್ಣಿ ಸೇರಿದಂತೆ ಇತರರು ಭಾಗವಹಿಸಿದ್ದರು.

# ನರಸಲಗಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆಯನ್ನು ಗುರುತಿಸಲು ಸರ್ಕಾರ ಪ್ರತಿಭಾ ಕಾರಂಜಿ ಎಂಬ ಕಾರ್ಯಕ್ರಮ ಜಾರಿಗೆ ತಂದಿದೆ. ಈ ಕಾರ್ಯಕ್ರಮದ ಮೂಲಕ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ತಾಲೂಕು, ಜಿಲ್ಲಾ, ರಾಜ್ಯ ಮಟ್ಟಕ್ಕೆ ಹೋಗುವಂತೆ ನಿರ್ಣಾಯಕರು ತಮ್ಮ ನಿರ್ಣಯ ನೀಡಬೇಕೆಂದು ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಾನಂದ ಮಂಗಾನವರ ಹೇಳಿದರು.

ತಾಲೂಕಿನ ಅಂಬಳನೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಪಂಚಾಯತ, ಕ್ಷೇತ್ರಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಾಧಿಕಾರಿಗಳ ಕಾರ್ಯಾಲಯ ಮತ್ತು ನರಸಲಗಿ ಸಮೂಹ ಸಂಪನ್ಮೂಲ ಕೇಂದ್ರದ ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡಿದ್ದ ನರಸಲಗಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಹೊರಹಾಕಲು ಶಿಕ್ಷಕ ಬಾಂಧವರು, ಪಾಲಕರು ಸೂಕ್ತ ಅವಕಾಶ,ಪ್ರೇರಣೆ ನೀಡುವದು ಅಗತ್ಯವಿದೆ ಎಂದ ಅವರು, ಸರ್ಕಾರ ಶಿಕ್ಷಣಕ್ಕೆ ಬಹಳ ಒತ್ತು ನೀಡುತ್ತಿದೆ.ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ,ಶೂ–ಸಾಕ್ಸ್, ಬಟ್ಟೆ , ಬಿಸಿಯೂಟ ಸೇರಿದಂತೆ ಅನೇಕ ಸೌಲಭ್ಯಗಳನ್ನು ನೀಡುತ್ತಿದೆ. ಇದರ ಸದುಪಯೋಗವಾಗುವ ಮೂಲಕ ಉತ್ತಮ ಶಿಕ್ಷಣ ಮಕ್ಕಳಿಗೆ ಸಿಗುವಂತಾಗಬೇಕೆಂದರು.

ಅಧ್ಯಕ್ಷತೆಯನ್ನು ಶಾಲೆಯ ಎಸ್ಡಿಎಂಸಿ ಅಧ್ಯಕ್ಷ ಸಿದ್ರಾಮಪ್ಪ ಪೂಜಾರಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಪಿ.ನಾಗಾವಿ, ಪ್ರಾಥಮಿಕ ಶಾಲಾ ಶಿಕ್ಷಕರ ಸೊಸಾಯಿಟಿ ನಿರ್ದೇಶಕ ಎಚ್.ಬಿ.ಬಾರಿಕಾಯಿ, ಸಿದ್ದಪ್ಪ ಅವಜಿ, ಬಾಲಪ್ಪಗೌಡ ಹೊಸಳ್ಳಿ,ಸಂಜೀವಪ್ಪಗೌಡ ಪಾಟೀಲ, ಶೇಖರಗೌಡ ಬಿರಾದಾರ, ಬಿ.ವ್ಹಿ.ಚಕ್ರಮನಿ, ಪಿ.ಎಸ್.ಬಾಗೇವಾಡಿ ಇತರರು ಇದ್ದರು. ಸಿಆರ್ಪಿ ಎಸ್.ಬಿ.ದಳವಾಯಿ ಪ್ರಾಸ್ತವಿಕವಾಗಿ ಮಾತನಾಡಿದರು. ಡಿ.ಆರ್.ಮಂಟ್ಯಾಳ ಪ್ರತಿಭಾ ಕಾರಂಜಿ ಕುರಿತಾದ ಕವನ ವಾಚಿಸಿದರು. ಆರ್.ಆರ್.ದಾಸರ ಸ್ವಾಗತಿಸಿದರು. ಎಚ್.ಎಂ.ಹೊಸಮನಿ ನಿರೂಪಿಸಿದರು. ಅರವಿಂದ ಸಜ್ಜನ ವಂದಿಸಿದರು.

ಇದೇ ಸಂದರ್ಭದಲ್ಲಿ ರಾಜ್ಯಮಟ್ಟದ ಸರ್ಕಾರಿ ನೌಕರರ ಸಂಘದ ಕ್ರೀಡಾಕೂಟದಲ್ಲಿ ಕುಸ್ತಿ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಶಿಕ್ಷಕ ಸಿದ್ದು ಬಾಗೇವಾಡಿ ಅವರನ್ನು ಸನ್ಮಾನಿಸಲಾಯಿತು.

# ಸ್ನೇಹಿತರು, ಕುಟುಂಬಸ್ಥರಿಗೆ ಸಿಬಿಐ, ಲೋಕಾಯುಕ್ತದಿಂದ ಕಿರುಕುಳ: ಡಿಸಿಎಂ ಡಿ.ಕೆ ಶಿವಕುಮಾರ್



ಬೆಂಗಳೂರು: ಅಕ್ರಮ ಆಸ್ತಿಗಳಿಕೆ ಪ್ರಕರಣವನ್ನು ರಾಜ್ಯ ಸರ್ಕಾರ ಸಿಬಿಐನಿಂದ ಲೋಕಾಯುಕ್ತಕ್ಕೆ ವರ್ಗಾವಣೆ ಮಾಡಿತ್ತು. ಆದರೆ ಸಿಬಿಐನವರು ತನಿಖೆಯನ್ನು ನಿಲ್ಲಿಸದೆ ಮುಂದುವರೆಸಿದ್ದಾರೆ.

ನೂರಕ್ಕೂ ಹೆಚ್ಚು ನನ್ನ ಸ್ನೇಹಿತರು, ಕುಟುಂಬಸ್ಥರಿಗೆ ತುಂಬಾ ಕಿರುಕುಳ ನೀಡುತ್ತಿದ್ದಾರೆ. ಇದೇ ಕೆಲಸವನ್ನು ಲೋಕಾಯುಕ್ತ ಕೂಡ ಮುಂದುವರೆಸಿದೆ, ಅವರಿಂದಲೂ ಕಿರುಕುಳ ಆಗುತ್ತಿದೆ” ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಲೋಕಾಯುಕ್ತ ವಿಚಾರಣೆ ನಂತರ ಲೋಕಾಯುಕ್ತ ಕಚೇರಿ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿದ ಅವರು “ಲೋಕಾಯುಕ್ತ ಕಳೆದ ಆರು ತಿಂಗಳಿನಿಂದ ತನಿಖೆ ಮಾಡುತ್ತಿದೆ. ಎರಡು ಗಂಟೆಗಳಿಗೂ ಹೆಚ್ಚು ಕಾಲ ನನ್ನನ್ನು ವಿಚಾರಣೆ ಮಾಡಿದರು. ಇವರಿಗಿಂತ ಸಿಬಿಐನವರೇ ಪರವಾಗಿಲ್ಲ. ಲೋಕಾಯುಕ್ತದವರು ವಿಚಿತ್ರ ಪ್ರಶ್ನೆಗಳನ್ನು ಕೇಳುತ್ತಿದ್ದಾರೆ. ಸಿಬಿಐನವರೇ ಇನ್ನು ನನಗೆ ಪ್ರಶ್ನೆಗಳನ್ನೇ ಕೇಳಿಲ್ಲ, ಒಂದು ದಿನವೂ ವಿಚಾರಣೆಗೆ ಕರೆಯಲಿಲ್ಲ. ಆದರೆ ಲೋಕಾಯುಕ್ತದವರು ಸಹ ಹಿಂಸೆ ಕೊಡುತ್ತಿದ್ದಾರೆ” ಎಂದರು.

“ಲೋಕಾಯುಕ್ತದ ಪ್ರಶ್ನೆಗಳಿಗೆ ಉತ್ತರಗಳನ್ನು ಕೊಟ್ಟಿದ್ದೇನೆ. ಒಂದಷ್ಟು ವಿಚಾರಗಳಲ್ಲಿ ಸ್ಪಷ್ಟನೆ ಪಡೆದುಕೊಳ್ಳಲು ಪ್ರಶ್ನೆಗಳನ್ನು ಕೇಳಿದ್ದು,ಇದಕ್ಕೆ ಸಂಬಂಧಿಸಿದಂತೆ ನನ್ನ ಬಳಿ ಇರುವ ಪೂರಕವಾದ ದಾಖಲೆಗಳನ್ನು ಸಲ್ಲಿಸುತ್ತೇನೆ” ಎಂದು ಅವರು ಹೇಳಿದರು. “ಬುಧವಾರ (ಆ.21) ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಿದ್ದರು. ಆಲಮಟ್ಟಿ ಅಣೆಕಟ್ಟೆಗೆ ಬಾಗಿನ ಅರ್ಪಿಸುವ ಕಾರ್ಯಕ್ರವಿದ್ದ ಕಾರಣಕ್ಕೆ ಇಂದು (ಗುರುವಾರ) ಹಾಜರಾಗುತ್ತೇನೆ ಎಂದು ಮನವಿ ಮಾಡಿಕೊಂಡಿದ್ದೆ” ಎಂದು ತಿಳಿಸಿದರು.

ಯಾವ ದಾಖಲೆಗಳನ್ನು ಕೇಳಿದ್ದಾರೆ ಎಂದು ಪ್ರಶ್ನಿಸಿದಾಗ “ನಾನು ಅದನ್ನೆಲ್ಲಾ ಹೇಳಲು ಆಗುವುದಿಲ್ಲ” ಎಂದರು. ಮತ್ತೊಮ್ಮೆ ವಿಚಾರಣೆಗೆ ಹಾಜರಾಗಬೇಕೆ ಎಂದು ಕೇಳಿದಾಗ “ಗೊತ್ತಿಲ್ಲ, ನಾನು ಕೊಟ್ಟಿರುವ ಉತ್ತರ, ದಾಖಲೆಗಳನ್ನು ಪರಿಶೀಲಿಸಿ ಮತ್ತೊಮ್ಮೆ ಕರೆಯುತ್ತಾರೆ” ಎಂದರು. ದೆಹಲಿ ಭೇಟಿಯ ಬಗ್ಗೆ ಕೇಳಿದಾಗ “ನಾನು ಮತ್ತು ಮುಖ್ಯಮಂತ್ರಿಗಳು ಹೋಗುತ್ತಿದ್ದೇವೆ” ಎಂದು ಉತ್ತರಿಸಿದರು.






## ಧಾರಾಕಾರ ಮಳೆಗೆ ತುಂಬಿ ಹರಿದ ಹಳ್ಳಕೊಳ್ಳ । ರಸ್ತೆ ಸಂಚಾರ ಬಂದ್

# ಬಿರುಗಾಳಿಗೆ ವಾಲಿದ ದ್ರಾಕ್ಷಿ ಪಡ :ರೈತನಿಗೆ ಸಂಕಷ್ಟ

ಉದಯರಶ್ಮಿ ನ್ಯೂಸ್



ತಿಕೋಟಾ: ತಾಲ್ಲೂಕಿನ ಜಾಲಗೇರಿ, ಟಕ್ಕಳಕಿ, ಲೋಹಗಾಂವ, ಹುಬನೂರ, ಕಳ್ಳಕವಟಗಿ, ಘೋಣಸಗಿ, ಸೋಮದೇವರಹಟ್ಟಿ ಸೇರಿದಂತೆ ವಿವಿಧೆಡೆ ಬುಧವಾರ ರಾತ್ರಿ ಗುಡುಗು ಹಾಗೂ ಬಿರುಗಾಳಿ ಸಹಿತ ಮಳೆಗೆ ಹಳ್ಳಕೊಳ್ಳಗಳು ಭರಪೂರ ತುಂಬಿ ಹರಿಯುತ್ತಿವೆ.

ವಿವಿಧ ಗ್ರಾಮಗಳ ನಡುವಿನ ಸೇತುವೆಗಳು ಮೇಲ್ಮಟ್ಟದಿಂದ ತುಂಬಿ ಹರಿಯುತ್ತಿದ್ದು, ಹಲವೆಡೆ ವಾಹನ ಸಂಚಾರ ಬಂದ್ ಆಗಿದ್ದು ಸಾರ್ವಜನಿಕರು ಪರದಾಡುವಂತಾಗಿದೆ. ಬಿರುಗಾಳಿಗೆ ದ್ರಾಕ್ಷಿ ಪಡದ ಸಾಲುಗಳು ನೆಲಕ್ಕುರುಳಿ ರೈತನಿಗೆ ಸಂಕಷ್ಟ ತರಿಸಿದೆ.

ಟಕ್ಕಳಕಿ ಹಾಗೂ ಡೋಕಳೆವಾಡಿ ಮಧ್ಯೆ ಇರುವ ಹಳ್ಳ ಸಂಪೂರ್ಣ ತುಂಬಿ ಹರಿಯುತ್ತಿದ್ದು ದಿನವಿಡಿ ಯಾವುದೇ ವಾಹನ ಸಂಚಾರ ಆಗದೇ ರಸ್ತೆ ಸಂಪೂರ್ಣ ಬಂದ್ ಆಗಿ ಸಾಲುಗಟ್ಟಲೇ ವಾಹನಗಳು ಎರಡು ಬದಿಗೆ ನಿಂತುಕೊಂಡ ದೃಶ್ಯ ಕಾಣುತ್ತಿತ್ತು. ಹುಬನೂರ ಹಳ್ಳ ಸಹ ಸೇತುವೆ ಮೇಲಿಂದ ನೀರು ಹರಿಯುತ್ತಿತ್ತು. ರೈತರ ಜಮೀನಿನ ಒಡ್ಡುಗಳಲ್ಲಿ ನೀರು ತುಂಬಿದ್ದವು, ಕೆಲವೆಡೆ ಒಡ್ಡು ಒಡೆದು ಹೋಗಿವೆ.

> “ಪ್ರತಿದಿನ ಡೋಕಳೆವಾಡಿ ಮಾರ್ಗವಾಗಿ ಶಾಲೆಗೆ ಹೋಗುತ್ತಿದ್ದೆವು, ಇಂದು ಸೇತುವೆ ಮೇಲೆ ಸಂಚಾರ ಬಂದ್ ಆಗಿದ್ದರಿಂದ ಲೋಹಗಾಂವ ಮಾರ್ಗವಾಗಿ ಶಾಲೆಗೆ ತುಲುಪಿದೆವು.”
>
> – ರಾಜೇಶ ಪಾಟೀಲ ಹಾಗೂ ಮಹಾಂತೇಶ ರಾಠೋಡ ಶಿಕ್ಷಕರು, ರಾವಜಿವಸ್ತಿ ಟಕ್ಕಳಕಿ



ವಾಲಿದ ದ್ರಾಕ್ಷಿ ಪಡ: ಲೋಹಗಾಂವ ತಾಂಡಾ ನಿವಾಸಿ ರಾಜು ಹುನ್ನೂರ ಅವರ ಜಮೀನಿನಲ್ಲಿದ್ದ 2700 ದ್ರಾಕ್ಷಿ ಗಿಡಗಳಲ್ಲಿ ಐದು ದ್ರಾಕ್ಷಿ ಗಿಡಗಳ ಸಾಲು (ಐದು ನೂರು ಗಿಡ) ನೆಲಕ್ಕಿರುಳಿವೆ. ಸಾಲುಗಳಲ್ಲಿದ್ದ ಕಲ್ಲಿನ ಕಂಬಗಳು ಮುರಿದಿದ್ದು, ಬಿದಿರು ಕಿತ್ತು ಹೋಗಿವೆ. ಮೊದಲ ವರ್ಷದ ಆದಾಯದ ನಿರೀಕ್ಷೆಯಲ್ಲಿದ್ದ ರೈತ ರಾಜು ಸಾಲ ಮಾಡಿ ದ್ರಾಕ್ಷಿ ಬೆಳೆ ನಾಟಿ ಮಾಡಿದ್ದರು. ಬಿರುಗಾಳಿ ಸಹಿತ ಮಳೆಗೆ ಧರೆಗುರುಳಿದ ದ್ರಾಕ್ಷಿ ಪಡದ ಸಾಲುಗಳನ್ನು ಪುನಃ ನಿಲ್ಲಿಸಲು ₹ 25 ಸಾವಿರಕ್ಕೂ ಹೆಚ್ಚು ಖರ್ಚಾಗುತ್ತದೆ ಎಂದು ತಿಳಿಸಿದನು.

# ಸದವಕಾಶ



## ಭಾವರಶ್ಮಿ

– –ವಿಜಯಲಕ್ಷ್ಮಿ ಮೂರ್ತಿ

(“ನಮ್ಮ ಕಥಾ ಅರಮನೆ” ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ಸಂಸಾರ ಸಾರವಿಲ್ಲದೆ ನಡೆಯುತ್ತಿತ್ತು.. ಮಕ್ಕಳ ಮದುವೆಯಾಗಿ ಮನೆಯಲ್ಲಿ ಈಗ ಸುಚಿತ್ರ ಹಾಗೂ ನರೇಂದ್ರ ದಂಪತಿಗಳು ಮಾತ್ರ. ತೀರ ದೊಡ್ಡದಾಗಿ ಮನೆ ಇಲ್ಲದಿದ್ದರೂ ಸಾಕಷ್ಟು ದೊಡ್ಡದೇ ಮನೆ. ಮೂರು ಹೆಣ್ಣು ಮಕ್ಕಳ ಮದುವೆ ಮಾಡಿ ಉಸ್ಸಪ್ಪ! ಎಂದು ಹಾಯಾಗಿ ಇರುವ ಎಂದು ಕನಸು ಕಾಣುತ್ತಿದ್ದ ಸುಚಿತ್ರಳಿಗೆ ಈಗ ಒಂದು ವರ್ಷದಿಂದ ನರೇಂದ್ರನ ಸ್ವಭಾವ ಅರ್ಥವಾಗದೆ ಮನಸ್ಸು ಗೊಂದಲವಾಗಿದೆ..ಅವನು ಆಫೀಸ್ ಗೆ ಹೋದಷ್ಟು ವೇಳೆ ಮಾತ್ರ ಇವಳು ತನ್ನ ಕೆಲಸ ಮುಗಿಸಿ ಬಿಡಬೇಕಾಗಿತ್ತು... ಅವನು ಬಂದ ಮೇಲೆ ಅವನ ಹತ್ತಿರ ಕೂತು ಕಾಲ ಕಳೆಯಬೇಕು... ಇಲ್ಲದಿದ್ದರೆ ಕಿರಿಚಾಡಿ ಮನೆಯಲ್ಲಿದ್ದ ಸಾಮಾನುಗಳನ್ನು ಹರಡಿ ಎಲ್ಲೆಂದರಲ್ಲಿ ಎಸೆಯುತ್ತಿದ್ದ.

ಇವನ ಹುಚ್ಚಾಟದಿಂದ ಬಹಳ ಬೇಜಾರಾಗಿ ಎಷ್ಟೋ ಸಲ ಸುಚಿತ್ರಳಿಗೆ ಈ ಎಲ್ಲಾ ಜಂಜಾಟ ದಿಂದ ದೂರ ಹೋಗಿ ಇರುವ ಎಂದು ಅನಿಸುವುದು.... ಆದರೆ ಆ ಧೈರ್ಯ ಸುಚಿತ್ರಳಿಗೆ ಇರಲಿಲ್ಲ... ಯಾರಿಗಾದರೂ ಹೇಳೋಣವೆಂದರೆ ತನ್ನ ಗಂಡನನ್ನು ತಾನೇ ಎಲ್ಲರ ಮುಂದೆ ಹಿಯಾಳಿಸದಂತೆ ಆಗುತ್ತೆ.

ಒಂದು ಸುಂದರವಾದ ದಿನ ಎಂದಿನಂತೆ ಅಂಗಳದಲ್ಲಿ ನೀರು ಚುಮುಕಿಸಿ ರಂಗೋಲಿ ಹಾಕಿ ಬಂದ ಸುಚಿತ್ರ ಗಂಡನ ಕಣ್ಣಲ್ಲಿ ಕೋಪ ಇಣುಕುತ್ತಿದ್ದದ್ದು ನೋಡಿ ಆಶ್ಚರ್ಯದಿಂದ ಏನಾಯಿತು? ಈಗ ಎಂದು ಕೇಳಿದಳು...ಇದೇನು ರಂಗೋಲಿಯಾ? ಮನೆ ಮುಂದೆ ಹಾಕುವುದು ಚುಕ್ಕಿ ರಂಗೋಲಿ.. ನೀನು ನೋಡಿದರೆ ಯಾವಾಗಲೂ ಒಂದೇ ತರ ಗೆರೆ ಹಾಕಿ ರಂಗೋಲಿ ಹಾಕುತ್ತೀಯಾ? ನಿನ್ನ ತಲೆಯಲ್ಲಿ ಏನಿದೆ? ಯಾವ ಕೆಲಸವನ್ನು ಸರಿಯಾಗಿ ಮಾಡಲು ಬರುವುದಿಲ್ಲ ಎಂದು ಕೂಗಾಡುತ್ತಾ... ಕಾಫೀ ಯಾವಾಗ ಕೊಡುತ್ತೀಯಾ? ಎಂದ ಗಂಡನ ದೊಡ್ಡದಾದ ಧ್ವನಿ ಕೇಳಿ ಮನಸ್ಸು ತುಂಬಾ ಭಾರವಾಯಿತು.



ಆ ದಿವಸವೂ ಎಲ್ಲಾ ದಿನದಂತೆ ಕಳೆದು ಹೋಗುತ್ತಿತ್ತು... ಆದರೆ ನನ್ನ ಸ್ನೇಹಿತೆ ದೀಪಳ ಕರೆ ನನ್ನ ಜೀವನವನ್ನೇ ಬದಲಿಸುತ್ತದೆ ಎಂದು ನಾನು ಅಂದುಕೊಂಡಿರಲಿಲ್ಲ... ವರ್ಷದ ನಂತರ ಕರೆ ಮಾಡಿದ್ದ ನನ್ನ ಸ್ನೇಹಿತೆ... ಹೇಗಿದ್ದೀಯಾ? ಸಾರೀ.. ಕಣೇ.. ನಿನ್ನ ಕೊನೆಯ ಮಗಳ ಮದುವೆಗೆ ಬರಲಿಲ್ಲ... ಸ್ವಲ್ಪ ತೊಂದರೆ ಇತ್ತು ಫ್ಯಾಕ್ಟರಿಯಲ್ಲಿ .. ಎಂದು ಹೇಳಿ ಮುಗಿಸಲಿಲ್ಲ ಅವಳು....ನನಗೆ ಎಲ್ಲೂ ಇಲ್ಲದ ದುಃಖ ಬಂದು ಸಣ್ಣದಾಗಿ ಅಳುತ್ತಿದ್ದೆ... ಆದರೆ ನನ್ನ ಸ್ನೇಹಿತೆಗೆ ನಾನು ಅಳುವುದು ಕೇಳಿ... ಏನಾಯಿತು? ಸುಚಿತ್ರ... ಎಂದು ಕಳಕಳಿಯಿಂದ ವಿಚಾರಿಸಿದಳು..

ನನ್ನ ಮನಸ್ಸಿನಲ್ಲಿ ಆಗುತ್ತಿದ್ದ ಸಂಕಟ ಎಲ್ಲವನ್ನೂ ಹೇಳಿ... ಏನಾದರೂ ಕೆಲಸ ಸಿಗುತ್ತಾ? ನಿಮ್ಮ ಫ್ಯಾಕ್ಟರಿಯಲ್ಲಿ ಎಂದು ವಿಚಾರಿಸಿದೆ... ಅವರ ಫ್ಯಾಕ್ಟರಿಯಲ್ಲಿ ಮೇಲ್ವಿಚಾರಣೆ ನೋಡಿಕೊಳ್ಳುತ್ತಿದ್ದ ಹೆಂಗಸಿಗೆ ಕಾಯಿಲೆ ಬಂದು ಕೆಲಸವನ್ನು ಬಿಟ್ಟಿದ್ದಾರೆ... ಹಾಗಾಗಿ ದೀಪಾಗೆ ಒಂದು ಚೂರು ಬಿಡುವಿಲ್ಲವಂತೆ.. ನೀನು ದಿನವೂ ಬಂದು ಫ್ಯಾಕ್ಟರಿ ನೋಡಿಕೊಂಡರೆ ನಾನು ಬೇರೆ ಕೆಲಸ ನೋಡಿಕೊಳ್ಳಬಹುದು ಎಂದಳು...

ನಾನು ಆ ಸದವಕಾಶವನ್ನು ಬಿಡದೇ ಅವಳ ಫ್ಯಾಕ್ಟರಿಯಲ್ಲಿ ಕೆಲಸಕ್ಕೆ ಸೇರಿಕೊಂಡೆ... ಪ್ರತಿಯೊಂದು ಕೆಲಸವನ್ನೂ ನಾನು ನನ್ನದೇ ಫ್ಯಾಕ್ಟರಿ ಅನ್ನುವ ಹಾಗೆ ಕೆಲಸ ಮಾಡಿದೆ..ನನ್ನ ಸ್ನೇಹಿತೆ ದೀಪಾ ಅದನ್ನು ಗುರುತಿಸಿ ನನ್ನನ್ನು ಪಾರ್ಟ್ನರ್ ಆಗಿ ತನ್ನ ಫ್ಯಾಕ್ಟರಿಗೆ ಸೇರಿಸಿಕೊಂಡಳು.

ಈಗ ನಾನು ಹೆಮ್ಮೆಯ ತಾಯಿ ಹಾಗೂ ನರೇಂದ್ರನ ಮುದ್ದಿನ ಮಡದಿ... ಯಾಕೆ? ನನಗೆ ಆ ರೀತಿ ಗೋಳು ಕೊಟ್ಟರಿ ಎಂದು ಒಂದು ದಿನವೂ ನಾನು ಕೇಳಲಿಲ್ಲ.. ನರೇಂದ್ರ ತಾನೇ ಒಂದು ದಿನ ನನ್ನ ಆರ್ಥಿಕ ಸ್ಥಿತಿ ಮಕ್ಕಳ ಮದುವೆಯಾದ ಮೇಲೆ ತುಂಬಾ ಹದಗೆಟ್ಟಿತ್ತು ... ನನ್ನ ಮನಸ್ಥಿತಿ ಸರಿ ಇರಲಿಲ್ಲ... ನಿವೃತ್ತಿ ಆದ ಮೇಲೆ ಏನು? ನಮ್ಮ ಗತಿ ಎಂದು ಯೋಚಿಸಿ ಯಾವುದರಲ್ಲೂ ಆಸಕ್ತಿ ಇಲ್ಲದೆ ದಿನ ಕಳೆಯುತ್ತಿದ್ದೆ... ಮಾನಸಿಕವಾಗಿ ನನ್ನನ್ನು ಹಿಂಸಿಸಿಕೊಂಡು ನಿನಗೂ ತೊಂದರೆ ಕೊಟ್ಟೆ...ನನ್ನನ್ನು ಕ್ಷಮಿಸು ಎಂದು ಕೇಳಿಕೊಂಡರು.

ಆದರೆ ಅವರ ಆ ರೀತಿಯ ನೆಡವಳಿಕೆ ಈಗ ನಾನು ಒಂದು ಉತ್ತಮ ಸ್ಥಾನ ಪಡೆಯಲು ಸಾಧ್ಯವಾಯಿತು...ಎನ್ನುವುದೇ ನನಗೆ ತೃಪ್ತಿ.





ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

– ಕಾವ್ಯ ಸುಧೆ

(“ನಮ್ಮ ಕಥಾ ಅರಮನೆ” ಬರಹಗಾರರು)



### ಮಣ್ಣು

ತಾಯಿಯ ಮಡಿಲದೆಷ್ಟು ಶ್ರೇಷ್ಠ
ಭೂತಾಯಿಯ ಒಡಲು ಉತ್ಕೃಷ್ಟ

ಪ್ರಕೃತಿಗೆ ಹಸಿರನು ನೀಡುತ
ಜೀವಿಗುಸಿರ ಅಮೃತ ನೀಡುತ

ಅನಂತ ಕಣಕಣದಿ ಹೊಳೆದಿದೆ
ಗರ್ಭದಿ ಸುಧೆಯು ಅಡಗಿದೆ

ಚಿರನಿದ್ರೆಯ ಸೆರಗು ಹೊದಿಸಿ
ಮಣ್ಣಿನೊಡಲ ಸೊಗವ ಉಣಿಸಿ

ದಣಿದು ಬಂದವರ ಮಡಿಲೊಳು
ಲಾಲಿ ಹಾಡಿ ಮಲಗಿಸುವಳು

ಅನ್ನದ ಋಣ ಮಣ್ಣಿನ ಋಣ
ತೀರೀತೆಂತು ಭೂಮಾತೆ ಋಣ....!!



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR